MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com | Yuva Marga | yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 54 | ಶನಿವಾರ : 13-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 54 | SATURDAY : 13-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ತಾರಕಕ್ಕೇರಿದ ಕುರ್ಚಿ ಕಿತ್ತಾಟ

**ಬೆಳಗಾವಿ, ಡಿ. 12–** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಕದನ ಮತ್ತೆ ತಾರಕಕ್ಕೇರಿದ್ದು, ವಿಧಾನಮಂಡಲದ ಅಧಿವೇಶನ ನಡೆಯುತ್ತಿರುವ ಬೆಳಗಾವಿಯಲ್ಲಿ ಕುರ್ಚಿ ಕಿತ್ತಾಟ, ಬಣ ರಾಜಕೀಯ, ಔತಣಕೂಟಗಳ ಮೇಲಾಟ ನಡೆದಿದೆ.

ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ಬ್ರೇಕ್‌ಫಾಸ್ಟ್ ನಂತರ ಕುರ್ಚಿ ಕಿತ್ತಾಟಕ್ಕೆ ಬೆಂಗಳೂರಿನಲ್ಲೇ ವಿರಾಮ ಬಿದ್ದು ಅಧಿವೇಶನದಲ್ಲಿ ಒಗ್ಗಟ್ಟು ಕಾಯ್ದುಕೊಳ್ಳುವ ಮಂತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಪಿಸಿದ್ದರು. ಆದರೆ, ಬೆಳಗಾವಿಯ ಅಧಿವೇಶನದ ಹೊತ್ತಿನಲ್ಲೇ ಕಾಂಗ್ರೆಸ್‌ನಲ್ಲಿ ಒಗ್ಗಟ್ಟು ಮಾಯವಾಗಿ ಬಣ ರಾಜಕೀಯ ಬಿರುಸಾಗಿ ನಾಯಕತ್ವ ಬದಲಾವಣೆ ಪರ-ವಿರೋಧ ಚಟುವಟಿಕೆಗಳು ಮತ್ತೆ ಗರಿಗೆದರಿ ತಾರಕಕ್ಕೇರಿವೆ.

ಎರಡು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆಲ ಶಾಸಕರೊಂದಿಗೆ ಮಾಜಿ ಶಾಸಕ ಫಿರೋಜ್ ಸೇಠ್ ಅವರ ನಿವಾಸದಲ್ಲಿ ತಮ್ಮ ಆಪ್ತರೊಂದಿಗೆ ಔತಣ ಕೂಟದಲ್ಲಿ ಭಾಗವಹಿಸಿದ್ದರು. ಇದಾದ ಬಳಿಕ ಎರೆಡೆರಡು ಬಾರಿ ಮುಖ್ಯಮಂತ್ರಿ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರು ನಾಯುಕತ್ವ ಬದಲಾವಣೆ ಇಲ್ಲ ಎಂದು



ಬಹಿರಂಗವಾಗಿಯೇ ಹೇಳಿಕೆ ನೀಡಿದ್ದು ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟಕ್ಕೆ ಕಿಚ್ಚು ಹಚ್ಚಿದಂತಾಗಿದೆ.

ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಬೆನ್ನಲ್ಲೆ ನಿನ್ನೆ ಸದನದಲ್ಲಿ ತಮ್ಮ ಆಪ್ತ ಶಾಸಕರೊಂದಿಗೆ ಸಮಾಲೋಚನೆ ನಡೆಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಿನ್ನೆ ರಾತ್ರಿ ಔತಣಕೂಟದ ನೆಪದಲ್ಲಿ ತಮ್ಮ ಶಕ್ತಿ ಪ್ರದರ್ಶನವನ್ನು ತೋರಿದ್ದಾರೆ.

ಬೆಳಗಾವಿಯ ಹೊರವಲಯದ ತೋಟದ ಮನೆಯಲ್ಲಿ ನಡೆದ ಈ ಔತಣಕೂಟದಲ್ಲಿ ಆಹಾರ ಸಚಿವ (2ನೇ ಪುಟಕ್ಕೆ)

## ದಲಿತರನ್ನು ಸಿಎಂ ಮಾಡಿ, ಜಮೀರ್ ಅಹ್ಮದ್‌ರಿಗೆ ಡಿಸಿಎಂ ಸ್ಥಾನ ನೀಡಿ : ಕಾಸಿಂ ಮುರಾರಿ ಒತ್ತಾಯ

ಯುವಮಾರ್ಗ ಸುದ್ದಿ

**ಮಸ್ಕಿ,ಡಿ.12–** ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ದಲಿತರು ಹಾಗೂ ಮುಸ್ಲಿಮರು ಸಾಕಷ್ಟು ಪ್ರಮಾಣದಲ್ಲಿ ಶ್ರಮವಹಿಸಿದ್ದಾರೆ ಆದ್ದರಿಂದ ಕಾಂಗ್ರೆಸ್ ಪಕ್ಷ ದಲಿತರಿಗೆ ಮುಖ್ಯಮಂತ್ರಿ ಮಾಡಬೇಕು ಹಾಗೂ ಜಮೀರ್ ಅಹ್ಮದ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ದಲಿತ ಮುಖಂಡ ಕಾಸಿಂ ಡಿ ಮುರಾರಿ ಒತ್ತಾಯಿಸಿದರು.

ಮಸ್ಕಿ ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಸಿ ಎಂ ಸಿದ್ದರಾಮಯ್ಯನವರು ಮುಂದು ವರೆಯುವುದಾದಡಿಜ ಇನ್ನು ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಒಂದು ವೇಳೆ ಸಿಎಂ ಅವರನ್ನು ಬದಲಾವಣೆ ಮಾಡುವುದಾದರೆ ಮುಖ್ಯಮಂತ್ರಿ ಸ್ಥಾನವನ್ನು ದಲಿತರಿಗೆ ಬಿಟ್ಟುಕೊಟ್ಟು ದಲಿತ ಮುಖ್ಯಮಂತ್ರಿಯನ್ನು ಮಾಡಬೇಕು. ಕಾಂಗ್ರೆಸ್ ನಲ್ಲಿ ಖರ್ಗೆ ಅವ್ರಿಗೆ




ಪ್ರಮುಖ ಆದ್ಯತೆ ನೀಡಿ ಇಲ್ಲದಿದ್ದರೆ ಸತೀಶ್ ಜಾರಕಿಹೊಳಿ, ಕೆ. ಎಚ್. ಮುನಿಯಪ್ಪ ಆರ್. ಬಿ. ತಿಮ್ಮಾಪುರ, ಹಾಗೂ ಉಪ ಮುಖ್ಯಮಂತ್ರಿ ಸ್ಥಾನವನ್ನು ಸಚಿವರಾದ ಜಮೀರ್ ಅಹ್ಮದ್ ಅವರಿಗೆ ನೀಡಬೇಕು ಇದರಿಂದ ಮುಂಬರುವ ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸೇರಿದಂತೆ ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಸಹಾಯವಾಗಲಿದೆ ಅಲ್ಲದೆ ಮುಂಬರುವ ವಿಧಾನಸಭೆ ಚುನಾವಣೆಗೂ ಅನುಕೂಲವಾಗಲಿದೆ ಎಂದು ಹೇಳಿದರು.

ನಂತರ ದಲಿತ ಮುಖಂಡರಾದ ಮಲ್ಲಪ್ಪ ಗೋನಾಳ ಮಾತನಾಡಿ ಕಾಂಗ್ರೆಸ್ ಪಕ್ಷ ದಲಿತರಿಗೆ ಹಾಗೂ ಅಲ್ಪಸಂಖ್ಯಾತರಿಗೆ ಸಿಎಂ ಡಿಸಿಎಂ ಸ್ಥಾನ ನೀಡುವ ಮೂಲಕ ನ್ಯಾಯ ಒದಗಿಸಬೇಕು ಎಂದು ಒತ್ತಾಯ ಮಾಡಿದರು.

ಈ ಸಂದರ್ಭದಲ್ಲಿ ಕಿರಣ್ ಮುರಾರಿ, ಚಿದಾನಂದ ಚಲುವಾದಿ ದುರುಗಪ್ಪ ಮುರಾರಿ, ಹುಲುಗಪ್ಪ ಹಸಮಕಲ, ಸೇರಿದಂತೆ ಇತರರು ಇದ್ದರು.

## ಜೋಳ ಬೆಳೆದ ರೈತರ ಜಮೀನುಗಳನ್ನು ಜಿಪಿಎಸ್ ಮಾಡಿ: ಚಾಮರಸ ಮಾಲೀಪಾಟೀಲ್



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.12–**ಪಟ್ಟಣದ ಶಾಸಕರ ಭವನದ ಆವರಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಘಟಕವತಿಯಿಂದ ತಹಸೀಲ್ದಾರ್ ರವರಿಗೆ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲೀ ಪಾಟೀಲ್ ಮಾತನಾಡಿ ತಾಲೂಕಿನಲ್ಲಿ ಜೋಳ ಬೆಳೆದ ರೈತರ ಜಮೀನುಗಳನ್ನು ಜಿ.ಪಿ.ಎಸ್. ಮಾಡಿ ಬೆಂಬಲ ಬೆಲೆ ಅಡಿಯಲ್ಲಿ ರೈತರಿಂದ ಜೋಳವನ್ನು ಖರೀದಿ ಮಾಡುವುದಕ್ಕೇ ಕೂಡಲೆ ನೊಂದಾಣಿ ಪ್ರಾರಂಭಿಸಬೇಕು , ತಾಲೂಕಿನಲ್ಲಿ ರೈತರ ಅನುಕೂಲಕ್ಕೆ ತಕ್ಕಂತೆ ಜೋಳ,ಭತ್ತ,ತೊಗರಿ ಖರೀದಿಗೆ ಅಗತ್ಯ ಸಂಖ್ಯೆಯಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಬೇಕು, ಹತ್ತಿ ಬೆಳೆದ ರೈತರು ಖರೀದಿ ಕೇಂದ್ರಗಳಲ್ಲಿ ಮಾರಾಟಕ್ಕೆ ಇರುವ ತೊಂದರೆಗಳನ್ನು ನಿವಾರಿಸಬೇಕು ಹಾಗೂ ನೊಂದಾಣಿಯಲ್ಲಿ ಇರುವಂತ ಸಮಸ್ಯೆಗಳನ್ನು ಸರಿಪಡಿಸಬೇಕು.ಗ್ರಾಮೀಣ ಭಾಗದ ರಸ್ತೆಗಳು ಹಾಳಗಿದ್ದು ಅವುಗಳನ್ನು ಸರಿಪಡಿಸಬೇಕು.ವಿದ್ಯುತ್ ತೊಂದರೆಗಳನ್ನು ನಿವಾರಿಸಬೇಕು, ಮಾನ್ವಿ ಪಟ್ಟಣದಲ್ಲಿ ಕೃಷಿ ಉತ್ಪನ್ನ ಕೇಂದ್ರದಿಂದ ನಡೆಯುತ್ತಿದ ಜಾನುವಾರುಗಳ ಮಾರಾಟದ ಸಂತೆ ರದ್ದಾಗಿರುವುದರಿಂದ ರೈತರು ಜಾನುವಾರುಗಳನ್ನು ಖರೀದಿಸುವುದಕ್ಕೆ ಹಾಗೂ ಮಾರಾಟ ಮಾಡುವುದಕ್ಕೆ ತೊಂದರೆಯಾಗಿರುವುದರಿಂದ ಕೂಡಲೆ ದನ ಮತ್ತು ಕುರಿ ಸಂತೆಯನ್ನು ಪ್ರಾರಂಭಿಸಬೇಕು ಎಂದು ಒತ್ತಾಯಿಸಿದರು.ಗ್ರೇಡ್-2 ತಹಸೀ ಲ್ದಾರ್ ಅಬ್ದುಲ್ ವಾಹಿದ್ ಮನವಿ ಸ್ವೀಕರಿಸಿ ಮಾತನಾಡಿ ರೈತರ ಸಮಸ್ಯೆಗಳ ನಿವಾರಣೆಗಾಗಿ ಸಂಬಂದಿಸಿದ ಇಲಾಖೆಯ ಅಧಿಕಾರಿಗಳ ಹಾಗೂ ರೈತ ಸಂಘದ ಪ್ರಾತಿನಿಧಿಗಳ ಸಭೆಯನ್ನು ನಡೆಸಿ ಪರಿಹಾರ ಕಂಡು ಕೊಳ್ಳಲಾಗುವುದು ಎಂದು ಬರವಸೆ ನೀಡಿದರು.ಪಟ್ಟಣದ ಶಾಸಕರ ಭವನದ ಆವರಣದಲ್ಲಿ ಬೆಳ್ಳಿಗೆ ಯಿಂದ ನೂರಾರು ರೈತರು ವಿವಿಧ ಬೇಡಿಕೆಗಳ ಈಡೆರಿಕೆಗಾಗಿ ಪ್ರತಿಭಟನೆ ನಡೆಸಿ ನಂತರ ಸ್ಥಳಕ್ಕೆ ಆಗಮಿಸಿದ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ಹಾಗೂ ಕೃಷಿ ಇಲಾಖೆಯ ತಾ.ಸಹಾಯಕ ನಿರ್ದೇಶಕರಾದ ಗುರುನಾಥ ಭೂಸನೂರ್ ರವರಿಗೆ ಮನವಿ ಸಲ್ಲಿಸಿದರು.

ರಾಜ್ಯ ಉಪಾಧ್ಯಕ್ಷರಾದ ದೊಡ್ಡಬಸವನಗೌಡ ಬಲ್ಲಟ್ಟಗಿ, ರಾಜ್ಯ ಕಾರ್ಯದರ್ಶಿಗಳಾದ ಯಂಕಪ್ಪ ಕಾರಬಾರಿ, ಸೂಗುರಯ್ಯ ಆರ್.ಎಸ್.ಮಠ,ಬಸವರಾಜ ಮಾಲಿ ಪಾಟೀಲ್, ಬೂದಯ್ಯಸ್ವಾಮಿ ಸಿದ್ದಯ್ಯಸ್ವಾಮಿ ಗೋರ್ಕಲ್, ಮಲ್ಲಣ್ಣದಿನ್ನಿ, ಹೆಚ್.ಶಂಕ್ರಪ್ಪ ದೇವತ್‌ಗಲ್, ದೇವರಾಜ ನಾಯಕ, ಅಮರೇಸ ಅಲ್ದಾಳ್, ಚಂದ್ರಶೇಖರ ,ಹನುಮಂತ, ದೇವೆಂದ್ರಪ್ಪ, ಶಿವರಾಜ, ಚನ್ನಬಸವ ಗವಿಗಟ್ಟ, ಶರಣಪ್ಪ, ಬ್ರಹ್ಮಯ್ಯ, ನಿಬಿಸಾಬ್, ಹನುಮಂತ.ಎಂ. ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

## ಶಿಕ್ಷಣದಿಂದ ಮಹಿಳಾ ಸಮಾನತೆ ಸಾಧ್ಯ : ವಿಶ್ವನಾಥ ಹೂಗಾರ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.12–** ಸಮಾಜ ಹೆಣ್ಣನ್ನು ಸಂಸ್ಕಾರವೆಂಬ ಚೌಕಟ್ಟಿನಲ್ಲಿ ಬಂಧಿಸಿ ಅವಳ ಕನಸನ್ನು ಮತ್ತು ಗುರಿಯನ್ನು ಕಸಿದುಕೊಳ್ಳುತ್ತಾ ಬರುತ್ತಿದೆ ಆದರೆ ನಿಜವಾದ ಸಂಸ್ಕಾರ ಎನ್ನುವುದು ತಡೆಗೋಡೆಗಳನ್ನು ಕಟ್ಟುವುದಲ್ಲ ಅವಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣದಿಂದ ಮಹಿಳಾ ಸಮಾನತೆ ಸಾಧ್ಯ ಎಂದು ವರದಿಗಾರ ವಿಶ್ವನಾಥ್ ಹೂಗಾರ ವಿದ್ಯಾರ್ಥಿನಿಯರಿಗೆ ಕಿವಿ ಮಾತು ಹೇಳಿದರು.

ಪಟ್ಟಣದ ಡಾ. ಸುಧಾ ಮೂರ್ತಿ ಇನ್ಫೋ ಮಹಿಳಾ ಪದವಿ ಕಾಲೇಜಿನ 2026-27ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ 7 ನೇ ದಿನದ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ವಿಶೇಷ ಉಪನ್ಯಾಸ ನೀಡಿದರು. ಹೆಣ್ಣಿಗೆ ಶಿಕ್ಷಣ ಒಂದೇ ಸಾಲದು ಜೊತೆಗೆ ಸಂಸ್ಕಾರವು ಬೇಕೆ.ಹೆಣ್ಣೊಂದು ಕಲಿತರೆ ಶಾಲೆಒಂದು ತೆರೆದಂತೆ ಆದ್ದರಿಂದ ಮಹಿಳಾ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿ ಎಂದರು.



ಹೆಣ್ಣು ಮಗಳ ಜೀವನ ದಿಕ್ಕಿಲ್ಲದ ದೀಪದಂತೆ ಆದ್ದರಿಂದ ಶಿಕ್ಷಣ ಅವಳಿಗೆ ಬದುಕು ಕೊಟ್ಟರೆ ಸಂಸ್ಕಾರ ಗೌರವ ಹೆಚ್ಚಾಗುವಂತೆ ಮಾಡುತ್ತದೆ ಹಾಗಾಗಿ ಹೆಣ್ಣುಮಕ್ಕಳ ಶಿಕ್ಷಣ ಮತ್ತು ಸಂಸ್ಕಾರವನ್ನು ಜೀವನದಕ್ಕೂ ಅಳವಡಿಸಿಕೊಂಡು ಆದರ್ಶ ಬದುಕು ನಿರ್ಮಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಪೂಜ್ಯ ಶ್ರೀ ಅಮರೇಶ್ವರ ಗುರು ಷ.ಬ್ರ ಶ್ರೀಗಜಗಂಡ ಶಿವಾಚಾರ್ಯ ಮಹಾಸ್ವಾಮಿಜಿಯವರು ತಮ್ಮ ಆಶೀರ್ವಚನದಲ್ಲಿ ಶಿಕ್ಷಣ ಮತ್ತು ಸಂಸ್ಕಾರ ಎರಡು ಭಾರತೀಯ ಸಂಸ್ಕೃತಿಯ ಭಾಗವಗಿದೆ. ಶಿಕ್ಷಣ ಅವಳ ಬದುಕಿಗೆ ಬೆಳಕಾದರೆ ಸಂಸ್ಕಾರ ಅವಳ ಹೃದಯಕ್ಕೆ ಬೆಳಕಾಗುತ್ತದೆ ಇವೆರಡು ಇದ್ದಾಗ ಅವಳು ಸಮಾಜದ ಮತ್ತು ಕುಟುಂಬದ ಶಕ್ತಿಯಾಗಲು ಸಾಧ್ಯ ಅದ್ದರಿಂದ ನಿಮ್ಮ ಬಾಳಲ್ಲಿ ಇವೆರಡು ಮುಖ್ಯವಾಗಲಿ ಎಂದರು.

ಮಾರುತಿ.ಎಸ್ ಮತ್ತು ಎಇಇ ಕೆಂಚಪ್ಪ ಬಾವಿಮನಿ, ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಅರ್ಪಿತ ಕೆ ಬಾವಿಮನಿ ಆಡಳಿತ ಅಧಿಕಾರಿಗಳಾದ ವಿನೋದ್ ಗುಡಿಮನಿ, ಪ್ರಾಚಾರ್ಯ ರಮೇಶ ವೆಂಕಟಪುರ ಸೇರಿದಂತೆ ಉಪನ್ಯಾಸಕರು, ವಿದ್ಯಾರ್ಥಿನಿಯರು, ಗ್ರಾಮಸ್ಥರು ಇದ್ದರು.

## ಅಪರಾಧ ತಡೆ ಮಾಸಾಚರಣೆ: ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.12–**ಅಪರಾಧ' ತಡೆ ಮಾಸಾಚರಣೆಯ ಪ್ರಯುಕ್ತವಾಗಿ ಮಾನ್ವಿ ಪೊಲೀಸ್ ಠಾಣಾ ವತಿಯಿಂದ ಪಟ್ಟಣದ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಅಪರಾಧ ತಡೆ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಮಾನ್ವಿ ಪೊಲೀಸ್ ಠಾಣೆಯ ಪಿಎಸ್‌ಐ ಅಜ್ಮೀರ್ ಅವರು ಮಾತನಾಡಿ, "ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿರಬೇಕು. ಯಾವುದೇ ರೀತಿಯ ಕೆಟ್ಟ ಚಟುವಟಿಕೆಗಳಿಗೆ ಬಲಿಯಾಗದೆ, ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು. ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಕಾನೂನನ್ನು ಗೌರವಿಸಬೇಕು ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸರಿಗೆ ಸಹಕಾರ ನೀಡಬೇಕು. ಸೈಬರ್ ಅಪರಾಧಗಳ ಬಗ್ಗೆ ವಿದ್ಯಾರ್ಥಿಗಳು ಜಾಗರೂಕರಾಗಿರಬೇಕು" ಎಂದು ಸಲಹೆ ನೀಡಿದರು.ಸಮಾಜದಲ್ಲಿನ ಅಪರಾಧಗಳ ಸ್ವರೂಪ, ಅಪರಾಧಗಳು ಸಂಭವಿಸದಂತೆ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು ಮತ್ತು ಅಪರಾಧಗಳ ಬಗ್ಗೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡುವ ಕುರಿತು ವಿವರವಾಗಿ ತಿಳಿಸಿದರು.



ಎಎಸ್ ಐ ಹನುಮೇಶ್,ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮನೋಜ್ ಕುಮಾರ್ ಮಿಶ್ರಾ, ಕಾರ್ಯದರ್ಶಿಗಳು ಅನಿಲಕುಮಾರ್ ಹೆಚ್, ಅಂಜನೇಯ ಹೆಚ್, ಪ್ರಾಚರ್ಯರಾದ ರೇಣುಕಾ, ಶಿವುಕುಮಾರ್ , ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಪ್ರತಿಯೊಬ್ಬರು ರಸ್ತೆ ಸುರಕ್ಷತೆ, ಸೈಬರ್ ವಂಚನೆಗಳಿಂದ ಜಾಗೃತರಾಗಬೇಕು:ಎಸ್ಪಿ ಎಂ.ಪುಟ್ಟಮಾದಯ್ಯ.

ಯುವಮಾರ್ಗ ಸುದ್ದಿ

**ಸಿಂದನೂರು,ಡಿ.12–**ಜನವರಿ 2025 ರಿಂದ ಇಲ್ಲಿಯವರೆಗೂ ಸುಮಾರು 262 ವ್ಯಕ್ತಿಗಳು ಅಪಘಾತದಲ್ಲಿ ಮರಣ ಹೊಂದಿದ್ದು, 700ಕ್ಕೂ ಅಧಿಕ ಜನರು ತೀವ್ರ ಗಾಯಗೊಂಡಿದ್ದು, ಗಾಯಾಳುಗಳಲ್ಲಿ ಇನ್ನೂ ಕೆಲವರು ಉಳಿಯುತ್ತಾರೋ ಇಲ್ಲವೋ ಅನ್ನುವುದು ನಂಬಿಕೆಯಿಲ್ಲ. ದೇಶದಾದ್ಯಂತ ಪ್ರತಿದಿನ ವಾಹನಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ನಮ್ಮ ರಾಯಚೂರು ಜಿಲ್ಲೆ ಕೂಡ ಹೊರತಾಗಿಲ್ಲ ವಾಹನಗಳ ಸಂಖ್ಯೆ ಹೆಚ್ಚಾಗಿದ್ದು ರಸ್ತೆಗಳು ಮಾತ್ರ ಕಿರಿದಾಗಿರುವುದು ಅಸುರಕ್ಷತೆಯಾಗಿದೆ. ಪ್ರತಿಯೊಬ್ಬರು ರಸ್ತೆ ಸುರಕ್ಷತೆಗಾಗಿ, ಸೈಬರ್ ವಂಚನೆಗಳಿಂದ ಜಾಗೃತರಾಗಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಹೇಳಿದರು.

ನಗರದ ಟೌನ್ ಹಾಲ್ ನಲ್ಲಿ ಸಿಂಧನೂರು ಪೊಲೀಸ್ ಉಪವಿಭಾಗದ ವತಿಯಿಂದ ಆಯೋಜಿಸಿದ್ದ ಸೈಬರ್ ಅಪರಾಧಿಗಳ ಮಾಸಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಕಾರ್ಯಕ್ರಮ



ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ವಾಹನಗಳಲ್ಲಿ ಸಂಚರಿಸುವಾಗ ಸಾರಿಗೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಆದರೆ ನಿಯಮಗಳನ್ನು ಪಾಲಿಸದ ಪರಿಣಾಮ ಮೂರು ಪಟ್ಟು ಹೆಚ್ಚು ವಾಹನಗಳ ಸವಾರರಿಗೆ ದಂಡವನ್ನು ವಿಧಿಸಲಾಗಿದ್ದು, ಬಹುತೇಕ ವಾಹನಗಳಿಗೆ ಇನ್ಸೂರೆನ್ಸ್ ರಿನಿವಲ್ ಮಾಡಿಸಿರುವುದಿಲ್ಲ ಅದರಲ್ಲೂ ಟ್ರಾಕ್ಟರ್ ಗಳಿಗೆ ಇನ್ಸೂರೆನ್ಸ್ ಇಲ್ಲ. ಮದ್ಯ ಸೇವಿಸಿ, ಹೆಲ್ಮೆಟ್ ಧರಿಸದೆ, ವಾಹನಗಳನ್ನು ಚಲಾಯಿಸುವುದರಿಂದ ಕೆಲವೊಮ್ಮೆ ಓವರ್ ಸ್ಪೀಡ್ ಹಾಗೂ ವಾಹನಗಳ ಚೇಸಿಂಗ್ ಮಾಡುವುದರಿಂದ ಹಲವಾರು ಜನರು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ. ಇದರಲ್ಲಿ ವಿದ್ಯಾರ್ಥಿ ಯುವಜನರು ಹೊರತಾಗಿಲ್ಲ. ಪರಿಣಾಮ ಹಲವಾರು ಕುಟುಂಬದ ಸದಸ್ಯರು ತಮ್ಮ ಕುಟುಂಬಕ್ಕೆ ದುಡಿಯುವ ಕೈಗಳನ್ನು ಮತ್ತು ಭವಿಷ್ಯದ ಬೆಳಕಾದ ಮಕ್ಕಳನ್ನೇ ಕಳೆದುಕೊಂಡಿದ್ದಾರೆ.

ಸೈಬರ್ ಪ್ರಕರಣಗಳಲ್ಲಿ ಬಹುತೇಕವಾಗಿ ವಂಚನಗೆ ಒಳಗಾಗುತ್ತಿರುವುದು ಅವಿದ್ಯಾವಂತರಲ್ಲ. ಸೈಬರ್ ಬಲಿಗೆ ವಿದ್ಯಾವಂತರು. ಹಣಕಾಸು ದುಪ್ಪಟ್ಟಿನ ಆಸೆಗಾಗಿ ಹಾಗೂ ತಾವು ಯಾವುದೋ ಬಹುಮಾನ ಗೆದ್ದಿದ್ದೀರಿ ಎಂದು ಸೈಬರ್ ವಂಚಕರು ಕಳಿಸುವ ಸಂದೇಶದ (2ನೇ ಪುಟಕ್ಕೆ)

## ಮೊದಲನೇಯ ಪುಟದಿಂದ

# ತಾರಕಕ್ಕೇರಿದ ಕುರ್ಚಿ ಕಿತ್ತಾಟ

ಕೆ.ಹೆಚ್. ಮುನಿಯಪ್ಪ, ಮೀನುಗಾರಿಕೆ ಸಚಿವ ಮಾಂಕಾಳ ವೈದ್ಯ, ಕೃಷಿ ಸಚಿವ ಚಲುವರಾಯಸ್ವಾಮಿ ಸೇರಿದಂತೆ 30 ಕ್ಕೂ ಹೆಚ್ಚು ಶಾಸಕರು ವಿಧಾನಸಭಾ ಸದಸ್ಯರು, 15 ವಿಧಾನಪರಿಷತ್ ಸದಸ್ಯರು, ಡಿಕೆಶಿ ಸಹೋದರ ಹಾಗೂ ಮಾಜಿ ಸಂಸದ ಡಿ.ಕೆ. ಸುರೇಶ್ ಸಹ ಪಾಲ್ಗೊಂಡಿದ್ದು ಇದರ ಜತೆಗೆ ಬಿಜೆಪಿಯಿಂದ ಉಚ್ಚಾಟಿತರಾದ ವಿಶ್ವನಾಥ್, ಶಿವರಾಮ್ ಹೆಬ್ಬಾರ್ ಸಹ ಔತಣಕೂಟದಲ್ಲಿ ಭಾಗಿಯಾಗಿದ್ದರು ಎಂದು ಹೇಳಲಾಗಿದೆ.

ಅಧಿವೇಶನ ನಡೆದಿರುವ ಹೊತ್ತಿನಲ್ಲಿ ಕಾಂಗ್ರೆಸ್‌ನಲ್ಲಿ ಬಣ ರಾಜಕೀಯ ಮೇಳೈಸಿ ಔತಣಕೂಟದ ರಾಜಕೀಯ ಬಿರುಸಾಗಿದ್ದು, ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ನಲ್ಲಿ ಹಲವು ಮಹತ್ತರ ಬದಲಾವಣೆಗಳಾಗುವ ಸಾಧ್ಯತೆಗಳನ್ನು ಈ ಔತಣಕೂಟಗಳು ಸಂಕೇತಿಸಿವೆ.

**ಆಪ್ತರೊಂದಿಗೆ ಚರ್ಚೆ**–ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ನಡೆದ ಔತಣಕೂಟದಲ್ಲಿ ಕಾಂಗ್ರೆಸ್ ಹೈಕಮಾಂಡ್ ಸೂಚನೆಯಂತೆ ನಾವೆಲ್ಲಾ ಅಧಿಕಾರ ಹಂಚಿಕೆಯ ಬಗ್ಗೆ ಏನನ್ನೂ ಮಾತನಾಡದೆ ಮೌನವಾಗಿದ್ದರೂ ಯತೀಂದ್ರ ಅವರು ನಾಯಕತ್ವ ಬದಲಾವಣೆ ಇಲ್ಲ ಎಂದು ಮುಖ್ಯಮಂತ್ರಿ ಪುತ್ರ ಯತೀಂದ್ರ ಸಿದ್ದರಾಮಯ್ಯ ಪದೇ ಪದೇ ಪುನರುಚ್ಚರಿಸುತ್ತಿರುವ ಬಗ್ಗೆ ಚರ್ಚೆ ನಡೆಸಿ ಈ ಹೇಳಿಕೆಗ ಕಡಿವಾಣ ಹಾಕುವ ಸಂಬಂಧ ಹೈಕಮಾಂಡ್ ನಾಯಕರೊಂದಿಗೂ ಚರ್ಚಿಸಲು ತೀರ್ಮಾನಿಸಿದ್ದಾರೆ ಎನ್ನಲಾಗಿದೆ.

ಅಧಿವೇಶನ ಮುಗಿದ ನಂತರ ದೆಹಲಿಗೆ ತೆರಳುತ್ತೇನೆ. ವರಿಷ್ಠರೊಂದಿಗೆ ಎಲ್ಲವನ್ನು ಚರ್ಚಿಸುತ್ತೇನೆ ಅಲ್ಲಿಯವರೆಗೂ ಯಾರೂ ಏನನ್ನೂ ಮಾತನಾಡಬೇಡಿ, ಯಾರ ಹೇಳಿಕೆಗೂ ಉತ್ತರ ಕೊಡುವ ಕೆಲಸ ಬೇಡ ಎಂದು ತಮ್ಮ ಆಪ್ತ ಶಾಸಕರಿಗೆ ಹೇಳಿದ್ದಾರೆ ಎಂದು ಹೇಳಲಾಗಿದೆ.

**ಸಿಎಂ ಗರಂ**– ನಾನು ದೆಹಲಿಗೆ ಹೋಗುತ್ತೇನೆ ಎಂದು ನಿಮಗೆ ಹೇಳಿದವರು ಯಾರು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾಧ್ಯಮಗಳ ವಿರುದ್ಧ ಗರಂ ಆದರು.ವಿಧಾನಮಂಡಲದ ಅಧಿವೇಶನ ಮುಗಿದ ನಂತರ ಮುಖ್ಯಮಂತ್ರಿಗಳು ದೆಹಲಿಗೆ ಹೋಗುತ್ತಾರೆ ಎಂಬ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಸಿಟ್ಟಾದ ಅವರು, ಯಾರ್ರೀ ನಿಮಗೆ ಹೇಳಿದ್ದು, ನಿಮಗೆ ಯಾರಾದರೂ ನಾನು ದೆಹಲಿಗೆ ಹೋಗುತ್ತೇನೆ ಎಂದು ಹೇಳಿದ್ದರಾ ಎಂದು ಪ್ರಶ್ನಿಸಿದರು.

**ಯಾವ ಔತಣಕೂಟವೂ ಇಲ್ಲ–ಏನೂ ಇಲ್ಲ**– ಬೆಳಗಾವಿಯಲ್ಲಿ ನಿನ್ನೆ ಶಾಸಕರಿಗೆ ಯಾವ ಔತಣಕೂಟವನ್ನು ಆಯೋಜಿಸಿರಲಿಲ್ಲ. ಬೆಳಗಾವಿ ಜಿಲ್ಲೆಯ ಜಿಲ್ಲಾ ಕಾಂಗ್ರೆಸ್‌ನ ಮಾಜಿ ಅಧ್ಯಕ್ಷರಾದ ದೊಡ್ಡಣ್ಣನವರ್ ನನ್ನ ಸ್ನೇಹಿತರು. ಅವರದ್ದು ದೊಡ್ಡ ಕುಟುಂಬ ಕಳೆದ 15 ವರ್ಷಗಳಿಂದ ನಮ್ಮ ಮನೆಗೆ ಊಟಕ್ಕೆ ಬನ್ನಿ ಎಂದು ಕರೆಯುತ್ತಿದ್ದರು. ಹೀಗಾಗಿ ನಾನು ಸೇರಿದಂತೆ ಒಂದಷ್ಟು ಶಾಸಕರು ಊಟಕ್ಕೆ ಹೋಗಿದ್ದೆವು ಅಷ್ಟೆ. ಅದರಲ್ಲಿ ಯಾವುದೇ ಔತಣಕೂಟವೂ ಇಲ್ಲ ಏನೂ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು.

ಪ್ರೀತಿಯಿಂದ ಊಟಕ್ಕೆ ಕರೆದರೆ ಬರಲ್ಲ ಎನ್ನಲು ಆಗುತ್ತದೆಯೇ. ಹಾಗಾಗಿ ದೊಡ್ಡಣ್ಣನವರ ಮನೆಗೆ ನಾವೆಲ್ಲಾ ಊಟಕ್ಕೆ ಹೋಗಿದ್ದೇವು. ಇದನ್ನೇ ಔತಣಕೂಟ ಎಂದು ಬಿಂಬಿಸುವುದು ಸರಿಯಲ್ಲ ಎಂದು ಹೇಳಿದರು. ನಮ್ಮ ಮಾಜಿ ಶಾಸಕರಾದ ಫಿರೋಜ್‌ಸೇಠ್, ಶಾಸಕ ಆಸೀಫ್ ಸೇಠ್ ಊಟಕ್ಕೆ ಕರೆದಿದ್ದಾರೆ. ಪ್ರೀತಿಯಿಂದ ಕರೆದರೆ ಊಟಕ್ಕೆ ಹೋಗುತ್ತೇನೆ. ಅದನ್ನೇ ಔತಣಕೂಟ ಎಂದೆಲ್ಲಾ ವ್ಯಾಖ್ಯಾನಿಸುವುದು ಬೇಡ ಎಂದು ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು.

**ಔತಣಕೂಟ ಇಲ್ಲ ಊಟ ಮಾಡಿದ್ದೇವೆ.** –ಬೆಳಗಾವಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಕೆಲ ಶಾಸಕರು ಒಟ್ಟಾಗಿ ಊಟ ಮಾಡಿದ್ದೇವೆ. ನಾವು ಒಟ್ಟಾಗಿ ಊಟ ಮಾಡುವುದು ತಪ್ಪೇ ಎಂದು ಮಾಗಡಿಯ ಕಾಂಗ್ರೆಸ್ ಶಾಸಕ ಬಾಲಕೃಷ್ಣ ಹೇಳಿದರು.

ಮುಖ್ಯಮಂತ್ರಿ ಬದಲಾವಣೆ ಇಲ್ಲ ಎಂಬ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಅವರು, ನಾನು ಆ ಬಗ್ಗೆ ಮಾತನಾಡಲ್ಲ. ಎಲ್ಲವನ್ನೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಬಾಲಕೃಷ್ಣ ಹೇಳಿ, ಯಾರೇ ಆಗಲಿ, ಇರಿಸು–ಮುರಿಸಿನ ಹೇಳಿಕೆ ನೀಡಬಾರದು ಎಂದು ಪರೋಕ್ಷವಾಗಿ ಯತೀಂದ್ರ ಹೇಳಿಕೆಗೆ ಅಸಮಾಧಾನ ಹೊರಹಾಕಿದರು.

**ಹೇಳಿಕೆ ಸಮರ್ಥಿಸಿದ ಯತೀಂದ್ರ** –ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಬೆಳಗಾವಿಯಲ್ಲಿ ಕಾಂಗ್ರೆಸ್ ಬಣಗಳ ಔತಣಕೂಟ ರಾಜಕೀಯ ಬಿರುಸಾಗಿರುವಾಗಲೇ ನಾಯಕತ್ವ ಬದಲಾವಣೆ ಇಲ್ಲ ಎಂಬ ಹೇಳಿಕೆ ನೀಡಿದ್ದ ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡು ನಾನು ಏನು ಹೇಳಬೇಕೋ ಅದನ್ನು ಹೇಳಿದ್ದೇನೆ. ಯಾರ್ಯಾರೋ ಮಾತುಗಳಿಗೆಲ್ಲಾ ನಾನು ಪ್ರತಿಕ್ರಿಯೆ ಕೊಡಲ್ಲ ಎಂದು ಹೇಳಿದರು.

ಬೆಳಗಾವಿಯಲ್ಲಿಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರ ಹಂಚಿಕೆ, ನಾಯಕತ್ವ ಬದಲಾವಣೆಗಳ ಸಂಬಂಧಿಸಿದಂತೆ ನಾನು ಏನು ಮಾತನಾಡಬೇಕೋ ಅದನ್ನು ಮಾತನಾಡಿದ್ದೇನೆ. ನನ್ನ ಹೇಳಿಕೆಗೆ ಯಾರ್ಯಾರು ಮಾತನಾಡಿದ್ದಾರೋ ಅದಕ್ಕೆಲ್ಲಾ ನಾನು ಪ್ರತಿಕ್ರಿಯೆ ಕೊಡಲ್ಲ ಎಂದು ಹೇಳಿ, ನಾಯಕತ್ವ ಬದಲಾವಣೆ ಇಲ್ಲ ಎಂಬ ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

**ಅಧಿವೇಶನದ ಬಳಿಕ ಡಿಕೆಶಿ ಸಿಎಂ– ಹುಸೇನ್**– ಸಂಕ್ರಾಂತಿಗೆ ಅಲ್ಲ ಅಧಿವೇಶನ ಮುಗಿದ ಬಳಿಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ ಆಗುತ್ತಾರೆ ಎಂದು ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನನ್ನ ಮನೆಯಲ್ಲಿ ಬರೆದಿದ್ದಕ್ಕೆ ನಾನು ಶಾಸಕನಾಗಿಲ್ಲವೇ. ಹಾಗೇಯೇ ಡಿ.ಕೆ.ಶಿ. ಅವರ ಹಣೆಯಲ್ಲೂ ಬರೆದಿದೆ. ಅವರು ಮುಖ್ಯಮಂತ್ರಿಯಾಗುತ್ತಾರೆ. ನಿನ್ನೆ ನಡೆದ ಔತಣಕೂಟದಲ್ಲಿ 55 ಮಂದಿ ಶಾಸಕರು ಸೇರಿದ್ದೇವು. ಊಟ ಮಾಡಿದ್ದೇವೆ ಅಷ್ಟೆ. ನಮಗೆ ಡಿ.ಕೆ. ಶಿವಕುಮಾರ್ ಸಿಎಂ ಆಗಬೇಕು, ಆಗುತ್ತಾರೆ ಎಂದರು.ನಿನ್ನೆ ನಡೆದ ಔತಣಕೂಟ ಸಭೆಯಲ್ಲಿ 50 ರಿಂದ 60 ಶಾಸಕರು ಭಾಗವಹಿಸಿದ್ದರೂ ಆದರೆ ರಾಜಕೀಯ ಚರ್ಚೆಯಾಗಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ರಾಜ್ಯ ತೊಗರಿ ಬೆಳೆಗಾರರಿಗೆ ಕೇಂದ್ರ ನೆರವು ಗುತ್ತೇದಾರ ಸ್ವಾಗತ

ಯುವಮಾರ್ಗ ಸುದ್ದಿ



**ಕಲಬುರಗಿ,ಡಿ.12**– ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದ್ದರಿಂದ ರಾಜ್ಯ ಸರ್ಕಾರ ಮೀನಾ ಮೇಷ ಏಣಿಸದೇ ಈ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಮಾಜಿ ಶಾಸಕ ಸುಭಾಷ ಆರ್ ಗುತ್ತೇದಾರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಕೇಂದ್ರ ಸರ್ಕಾರ ಪ್ರಸಕ್ತವಾಗಿ ತೊಗರಿ ಖರೀದಿಗೆ ಒಪ್ಪಿಗೆ ನೀಡಿದ್ದಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರದ ಸಚಿವ ಪ್ರಲ್ಹಾದ ಜೋಶಿ ಹಾಗೂ ಶಿವರಾಜಸಿಂಗ್ ಚೌವಾಣ ಅವರನ್ನು ಪತ್ರಿಕಾ ಹೇಳಿಕೆಯಲ್ಲಿ ಸುಭಾಷ್ ಆರ್ ಗುತ್ತೇದಾರ ಅಭಿನಂದಿಸಿದ್ದಾರೆ.

ಕೇಂದ್ರ ಸರ್ಕಾರ 9.67 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಕೇಂದ್ರ ಅನುಮತಿ ನೀಡಿದ್ದನ್ನು ಸಹ ಸ್ವಾಗತ ವ್ಯಕ್ತಪಡಿಸಿದ್ದಾರೆ. ಕೇಂದ್ರದ ಅನುಮತಿ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಿನಿಂದಲೇ ರೈತರ ನೊಂದಣಿ ಪ್ರಕ್ರಿಯೆ ಆರಂಭಿಸಿ ವಾರದೊಳಗೆ ತೊಗರಿ ಖರೀದಿ ಶುರು ಮಾಡಬೇಕೆಂದಿದ್ದಾರೆ.

**ಸಾವಿರ ರೂ ಪ್ರೋತ್ಸಾಹ ಧನ ನೀಡಲಿ**

ಅತಿವೃಷ್ಟಿ ಯಿಂದ ತೊಗರಿ ಬೆಳೆ ಹಾನಿಯಾಗಿ ಅಲ್ಲಲ್ಲಿ ಅಲ್ಪ ಸ್ವಲ್ಪ ಬೆಳೆ ಉಳಿದು ರಾಶಿಯಾಗುತ್ತಿದೆ. ಆದರೆ ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆವಿದ್ದು, ಕ್ವಿಂಟಾಲ್ ತೊಗರಿಗೆ ಕೇವಲ 7000 ರೂ. ದರದಲ್ಲಿ ಮಾರಾಟವಾಗುತ್ತಿದೆ. ರೈತರಿಗೆ ಕ್ವಿಂಟಾಲ್ ಗೆ 9000 ರೂ. ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಜತೆಗೆ ಮಾರುಕಟ್ಟೆಯಲ್ಲೂ ದರ ಹೆಚ್ಚಳಕ್ಕೆ ಕಾರಣವಾಗುತ್ತದೆ. ಹೀಗಾಗಿ ರಾಜ್ಯ ಸರ್ಕಾರ ಪ್ರತಿ ಕ್ವಿಂಟಾಲ್‌ಗೆ ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿ ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಪ್ರಾರಂಭಿಸಬೇಕು. ಕೇಂದ್ರದ ಬೆಂಬಲ ಬೆಲೆ ಕ್ವಿಂಟಾಲ್ ಗೆ 8 ಸಾವಿರ ರೂ ಇದ್ದು, ರಾಜ್ಯ ಸರ್ಕಾರ 1 ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿದರೆ ಕ್ವಿಂಟಾಲ್ ಗೆ 9 ಸಾವಿರ ರೂ ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದು ಸುಭಾಷ್ ಆರ್ ಗುತ್ತೇದಾರ ಆಗ್ರಹಿಸಿದ್ದಾರೆ.

ಕಳೆದ ವರ್ಷ ನೆಪಕ್ಕೆ ಮಾತ್ರ ತೊಗರಿ ಖರೀದಿ ಆರಂಭಿಸಲಾಗಿತ್ತು. ರೈತರ ನೊಂದಣಿಗೂ ಸಹ ಹಿಂದೇಟು ಹಾಕಲಾಯಿತ್ತಲ್ಲದೇ ತೊಗರಿ ಖರೀದಿ ಪ್ರಕ್ರಿಯೆಯೇ ನಡೆಯಲಿಲ್ಲ. ಮಾರುಕಟ್ಟೆಯಲ್ಲಿ ತೊಗರಿ ದರ ಬೆಂಬಲ ಬೆಲೆಗಿಂತ ಕಡಿಮೆಯಾಗಿದ್ದರೂ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಖರೀದಿ ನಡೆಯಲಿಲ್ಲ ಹಾಗೂ ರೈತರ ನೆರವಿಗೆ ಬರಲೇ ಇಲ್ಲ. ಹೀಗಾಗಿ ರೈತ ಮಾರುಕಟ್ಟೆಯಲ್ಲಿ ಇದ್ದ ದರಕ್ಕೆ ತೊಗರಿ ಮಾರಾಟ ಮಾಡಿ ಕೈ ಸುಟ್ಟುಕೊಂಡಿದ್ದಾನೆ. ಆದರೆ ಈ ಸಲ ಪ್ರತಿ ರೈತನು ತೊಗರಿ ಖರೀದಿ ಕೇಂದ್ರಗಳಲ್ಲೇ ಮಾರಾಟ ಮಾಡುವಂತೆ ಕ್ರಮ ಕೈಗೊಳ್ಳಬೇಕು. ಪ್ರಮುಖವಾಗಿ ಪಿಕೆಪಿಎಸ್ ಕಾರ್ಯದರ್ಶಿಗಳಿಗೆ ಖಡಕ್ ಎಚ್ಚರಿಕೆ ನೀಡಬೇಕು. ಒಂದು ವೇಳೆ ಸರ್ಕಾರ ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದ್ದಲ್ಲಿ ರೈತರು ಯಾವತ್ತು ಕ್ಷಮಿಸುವುದಿಲ್ಲ ಎಂದಿದ್ದಾರೆ.

ಎನ್‌ಡಿಆರ್‌ಎಫ್ ಅಡಿ ಎಲ್ಲರಿಗೂ ಪರಿಹಾರ ದೊರಕಲಿ: ಪ್ರಸಕ್ತವಾಗಿ ಅತಿವೃಷ್ಟಿಯಿಂದ ಬೆಳೆಗಳು ಹಾಳಾಗಿ ರೈತ ತೊಂದರೆಯಲ್ಲಿರುವುದು ಎಲ್ಲರಿಗೂ ತಿಳಿದ ವಿಷಯ. ಹೀಗಾಗಿ ಸರ್ಕಾರ ಇಷ್ಟೋತ್ತಿಗೆ ಬೆಳೆ ಹಾನಿ ಪರಿಹಾರವನ್ನು ಸಂಪೂರ್ಣವಾಗಿ ರೈತರ ಖಾತೆಗೆ ಜಮಾ ಮಾಡಬೇಕಿತ್ತು. ಮೂರು ಇಲ್ಲವೇ ಆರೇಳು ಸಾವಿರ ರೂ ಮಾತ್ರ ಹಾಕಲಾಗಿದೆ. ಎನ್‌ಡಿಆರ್‌ಎಫ್ ನಿಯಮಾವಳಿ ಅಡಿ ಪ್ರತಿಯೊಬ್ಬ ರೈತರಿಗೆ ಕೇಂದ್ರ ಸರ್ಕಾರದವೇ ಹೆಕ್ಟೇರ್ ಗೆ 8500 ರೂ. ನಂತೆ ಎರಡು ಹೆಕ್ಟೇರ್ ಸೇರಿ 17000 ರೂ ನೀಡಲಾಗುತ್ತದೆ. ಅದರ ಜತೆಗೆ ರಾಜ್ಯ ಸರ್ಕಾರದ್ದು ಸೇರಿದರೆ 34000 ರೂ. ಆಗುತ್ತದೆ. ಆದ್ದರಿಂದ ಪ್ರತಿ ರೈತಗೆ 34 ಸಾವಿರ ರೂ ಪರಿಹಾರ ನೀಡಬೇಕು. ಇಲ್ಲದಿದ್ದರೆ ರಾಜ್ಯ ಸರ್ಕಾರದ ಬೊಕ್ಕಸ ಖಾಲಿಯಾಗಿದೆ ಎಂಬುದಾಗಿ ತಿಳಿದುಕೊಳ್ಳಬೇಕಾಗುತ್ತದೆ. ಎಂದಿದ್ದಾರೆ.

ರೈತರು ಈಗಾಗಲೇ ತೊಗರಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸುವಂತೆ ಹಾಗೂ ಪ್ರೋತ್ಸಾಹ ಧನ ನೀಡುವಂತೆ ಆಗ್ರಹಿಸಿದ್ದಾರೆ. ಅದೇ ತೆರನಾಗಿ ಸರ್ಕಾರದ ಬಿಡಿಗಾಸು ಬೆಳೆ ಹಾನಿ ಪರಿಹಾರಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಳೆ ಹಾನಿ ಸಮೀಕ್ಷೆ ಸರಿಯಾಗಿ ಮಾಡದ ಕಾರಣ ರೈತರಿಗೆ ಹಾನಿ ತಕ್ಕ ಪರಿಹಾರ ಸಿಗದಂತಾಗಿದೆ. ಆದ್ದರಿಂದ ಸರ್ಕಾರ ಎಲ್ಲ ರೈತರಿಗೆ ಪರಿಹಾರ ದೊರಕಲು ಕ್ರಮ ಕೈಗೊಳ್ಳಬೇಕು. ಒಂದು ವೇಳೆ ರೈತರು ಬೀದಿಗಿಳಿದು ಕಾನೂನು ಕೈಗೆತ್ತಿಕೊಂಡರೆ ಸರ್ಕಾರವೇ ಹೊಣೆಯಾಗಬೇಕಾಗುತ್ತದೆ ಎಂದು ಗುತ್ತೇದಾರ ಎಚ್ಚರಿಕೆ ನೀಡಿದ್ದಾರೆ.

**100ಕ್ಕೆ 100ರಷ್ಟು ಬೆಳೆವಿಮೆ ದೊರಕಲಿ:** ಪ್ರಸಕ್ತವಾಗಿ ಕೇಂದ್ರದ ಪ್ರಧಾನ ಮಂತ್ರಿ ಫಸಲು ವಿಮಾ ಯೋಜನೆ ಅಡಿ ಅತಿ ಹೆಚ್ಚಿನ ರೈತರು ಬೆಳೆವಿಮೆ ಮಾಡಿಸಿದ್ದಾರೆ. ಹೀಗಾಗಿ ತೊಗರಿ ಬೆಳೆ ಹಾಳಾಗಿದ್ದರಿಂದ ನೂರಕ್ಕೆ ನೂರಷ್ಟು ಬೆಳೆ ವಿಮೆ ದೊರಕುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲಾಡಳಿತ ಮುಂದಾಗಬೇಕು. ಕನಿಷ್ಠ ಸಾವಿರ ಕೋ.ರೂ. ಯಾದರೂ ಜಿಲ್ಲೆಯ ರೈತರಿಗೆ ಬೆಳೆವಿಮೆ ದೊರಕಬೇಕೆಂದಿದ್ದಾರೆ.

**ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಮಾತೆತ್ತಿದರೆ ಕೇಂದ್ರದ ದತ್ತ ಬೊಟ್ಟು ಮಾಡುತ್ತಾರೆ. ಆದರೆ ಕೇಂದ್ರ ಸರ್ಕಾರವೇ 9. 67 ಮೆಟ್ರಿಕ್ ಟನ್ ತೊಗರಿ ಬೇಳೆ ಖರೀದಿಗೆ ಅನುಮತಿ ನೀಡಿದೆ. ಹೀಗಾಗಿ ರಾಜ್ಯ ಸರ್ಕಾರದಿಂದ ಪ್ರತಿ ಕ್ವಿಂಟಾಲ್ ಗೆ 1 ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿ ಈ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸುವ ಮುಖಾಂತರ ರೈತರಿಗೆ ಸ್ಪಂಧಿಸಲಿ.**

**ಸುಭಾಷ್ ಆರ್ ಗುತ್ತೇದಾರ, ಮಾಜಿ ಶಾಸಕರು ಆಳಂದ.**

# ಪ್ರತಿಯೊಬ್ಬರು ರಸ್ತೆ ಸುರಕ್ಷತೆ, ಸೈಬರ್ ವಂಚನೆಗಳಿಂದ ಜಾಗೃತರಾಗಬೇಕು:ಎಸ್ಪಿ ಎಂ.ಪುಟ್ಟಮಾದಯ್ಯ.

ಅನುಸಾರ ತಮ್ಮ ಮೊಬೈಲ್ ನಲ್ಲಿ ಬಂದಿರುವ ಒಟಿಪಿ ಹಾಗೂ ಇತರೆ ಸಂದೇಶಗಳನ್ನು ಕ್ಲಿಕ್ ಮಾಡುವುದರಿಂದ ಅದರಲ್ಲೂ ಪ್ರಮುಖವಾಗಿ ಮಹಿಳೆಯರು, ವಿದ್ಯಾರ್ಥಿನಿಯರು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಪೋಟೋಗಳನ್ನು ಅಪ್ಲೋಡ್ ಮಾಡಿದ ನಂತರ ಸೈಬರ್ ವಂಚಕರು ಇದನ್ನೇ ಬಂಡವಾಳ ಮಾಡಿಕೊಂಡು ಪೋಟೋವನ್ನು ವಿಕೃತಗೊಳಿಸಿ ಮಹಿಳೆಯರನ್ನು ಕುಗ್ಗಿಸಿ ಹಣವನ್ನು ದೋಚುತ್ತಿದ್ದಾರೆ. ಕಾರಣ ರಸ್ತೆ ಸುರಕ್ಷತೆಗಾಗಿ ಹಾಗೂ ಸೈಬರ್ ಅಪರಾಧಿಗಳಿಂದ ಜಾಗೃತರಾಗಿ ಸದೃಢ ಭಾರತ ನಿರ್ಮಾಣಕ್ಕಾಗಿ ಮುಂದಾಗಬೇಕೆಂದು ಕರೆ ನೀಡಿದರು.

ಸೈಬರ್ ಅಪರಾಧಿಗಳ ಮಾಸಾಚರಣೆ ಪ್ರಯುಕ್ತ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಹಾಗೂ ಭಾಷಣ ಸ್ಪರ್ಧೆ ಏರ್ಪಡಿಸಿ, ಪ್ರಥಮವಾಗಿ ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ 5 ಸಾವಿರ ನಗದು, ದ್ವಿತೀಯವಾಗಿ ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ 3 ಸಾವಿರ ನಗದು, ಹಾಗೂ ತೃತೀಯವಾಗಿ ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ 2 ಸಾವಿರ ನಗದು ಮತ್ತು ಪ್ರಶಂಸೆ ಪತ್ರ ನೀಡಿ, ಇಡೀ ದೇಶದಲ್ಲೇ ಅತ್ಯುತ್ತಮ ಪೊಲೀಸ್ ಠಾಣೆ ಪ್ರಶಸ್ತಿ ಪಡೆದ ಕವಿತಾಳ ಪೊಲೀಸ್ ಠಾಣೆಯ ಪಿಎಸ್ ಗುರುಚಂದ ಅವರಿಗೆ ಬಹುಮಾನವನ್ನು ವಿತರಿಸಲಾಯಿತು.

ಈ ವೇಳೆ: ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ, ತಾಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಚಂದ್ರಶೇಖರ್, ಡಿವೈಎಸ್ಪಿ ಚಂದ್ರಶೇಖರ್ ಜಿ

ಪೌರಾಯುಕ್ತ ಪಾಂಡುರಂಗ ಇಟಗಿ, ಖಾಸಗಿ ಶಿಕ್ಷಣ ಸಂಸ್ಥೆ ಮುಖ್ಯಸ್ಥರಾದ ಆರ್.ಸಿ.ಪಾಟೀಲ್, ಸೇರಿದಂತೆ ಸಿಪಿಐ ವೀರಾರೆಡ್ಡಿ, ತುರ್ವಿಹಾಳ ಪಿಎಸ್ ಸುಜಾತ, ಮಾನ್ವಿ ಪಿಎ ಕೆಂಚರೆಡ್ಡಿ, ಬಳಗಾನೂರು ಪಿಎಸ್ ಯರಿಯಪ್ಪ, ಪೊಲೀಸ್ ಸಿಬ್ಬಂದಿಗಳು ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನಿಂಬರ್ಗಾ ಕೆರೆ ಬಾಕಿ ಕಾಮಗಾರಿಗೆ ಅನುಮೋದನೆ

**ಕಲಬುರಗಿ,ಡಿ.12**– ಜಿಲ್ಲೆಯ ಅಳಂದ ತಾಲ್ಲೂಕಿನ ನಿಂಬರ್ಗಾದ ಕೆರೆಯ ಅಭಿವೃದ್ಧಿಯ ಕೆರೆಯ ಬಾಕಿ ಕಾಮಗಾರಿಯನ್ನು 2.45 ಕೋಟಿ ಮೊತ್ತದಲ್ಲಿ ಕೈಗೊಳ್ಳಲು ಜೂನ್.30 ರಂದು ಸರ್ಕಾರದಿಂದ ಅನುಮೋದನೆ ನೀಡಲಾಗಿದೆ. ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುವುದು ಎಂದು ಸಣ್ಣ ನೀರಾವರಿ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ತಿಳಿಸಿದರು.



ವಿಧಾನ ಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ್ತು ಸದಸ್ಯ ಬಿ.ಜಿ.ಪಾಟೀಲ್ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಈ ಕೆರೆ ನಿರ್ಮಾಣಕ್ಕಾಗಿ 12 ಎಕರೆ 1 ಗುಂಟೆ ಹೆಚ್ಚುವರಿ ಭೂಸ್ವಾಧೀನಕ್ಕಾಗಿ ಪ್ರಸ್ತಾವನೆಯನ್ನು ಕಲಬುರಗಿ ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಸಲ್ಲಿಸಲಾಗಿರುತ್ತದೆ ಹಾಗೂ 02.03.2022 ರಂದು ರೂ.48.10 ಲಕ್ಷ ರೂ ಮುಂಗಡ ಹಣವನ್ನು ಠೇವಣಿಯಾಗಿಡಲಾಗಿರುತ್ತದೆ. ರೈತರು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಮಗಾರಿಯನ್ನು ನಿರ್ವಹಿಸುವಂತೆ ತಕರಾರು ಮಾಡಿರುವ ಕಾರಣ, ಮೊದಲಿನ ಗುತ್ತಿಗೆದಾರರ ಟೆಂಡರನ್ನು ರದ್ದುಪಡಿಸಲಾಗಿರುತ್ತದೆ. ಭೂಸ್ವಾಧೀನ ಪ್ರಕ್ರಿಯೆಯು 19(1) ಹಂತದಲ್ಲಿರುತ್ತದೆ ಎಂದು ಸಚಿವರು ಉತ್ತರಿಸಿದರು.

# ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ತಡೆಯುವಲ್ಲಿ ವಿಫಲ

**ಹಗರಿಬೊಮ್ಮನಹಳ್ಳಿ. ಡಿ.12**– ಸರ್ಕಾರದ ಗ್ಯಾರಂಟಿಗಳಲ್ಲಿ ಒಂದಾದ ಅನ್ನ ಭಾಗ್ಯ ಯೋಜನೆಯ ಪಡಿತರ ಅಕ್ಕಿ ಕಾಳ ಸಂತೆಯಲ್ಲಿ ಮಾರಾಟ ವಾಗುತ್ತಿದ್ದರೂ, ತಡೆಗಟ್ಟುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಗ್ಯಾರಂಟಿ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಹೆಚ್. ಜಂದಿಸಾಬ್ ಬೇಸರ ವ್ಯಕ್ತಪಡಿಸಿದರು.



ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಪಂಚ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.ತಾಲೂಕಿನ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಪಡಿತರ ಅಕ್ಕಿಯನ್ನು ತಿಂಗಳ ಪೂರ್ತಿ ವಿತರಿಸಬೇಕು. ಭಾಗ್ಯಜ್ಯೋತಿ ಮನೆಗಳಿಗೆ 58 ಯೂನಿಟ್ ಮಾತ್ರ ವಿದ್ಯುತ್ ಒದಗಿಸುವುದು ಸೂಕ್ತವಲ್ಲ ಎಂದರು.

ಗ್ಯಾರಂಟಿ ಸಮಿತಿಯ ತಾಲೂಕ ಅಧ್ಯಕ್ಷ ಗುರುಬಸವರಾಜ್ ಸೊನ್ನದ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಶಕ್ತಿ ಯೋಜನೆಗೆ ಬಸವಗಳ ಕೊರತೆ ಇದೆ ಎಂದು ಆರೋಪಿಸುವ ಕೆಲವರಿಗೆ 2013 ರಿಂದ ಇದುವರೆಗೂ 57 ಹೊಸ ಬಸ್ಸುಗಳು ಕಲ್ಪಿಸಲಾಗಿದೆ. ಸಭೆಗೆ ಮಾಹಿತಿ ಇಲ್ಲದೆ ಮಾತನಾಡುತ್ತಿರುವುದು ತರವಲ್ಲ. ಐದು ಗ್ಯಾರಂಟಿ ಇಲಾಖೆಯವರು ತಮ್ಮ ಇಲಾಖೆಯಲ್ಲಿ ಯಾವುದೇ ಕಾರ್ಯಕ್ರಮ ನಡೆದರು ಅದರ ಬಗ್ಗೆ ಗ್ಯಾರಂಟಿ ಸಮಿತಿಯ ಸದಸ್ಯರಿಗೆ ಮಾಹಿತಿ ಹಾಗೂ ಆಹ್ವಾನ ನೀಡಬೇಕು. ಗೃಹಲಕ್ಷ್ಮಿ ಯೋಜನೆಯಡಿ ತಾಲೂಕಿನಲ್ಲಿ ಆಗಸ್ಟ್ ವರಿಗೆ ಮಾಸಿಕ 7.5ಕೋಟಿ ರೂ.ಯಂತೆ ಒಟ್ಟು 168 ಕೋಟಿ ರೂ. ನೀಡಲಾಗಿದೆ ಎಂದರು.

ಗ್ಯಾರಂಟಿ ಜಿಲ್ಲಾ ಸದಸ್ಯ ಪರಶುರಾಮ್ ಮಾತನಾಡಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್ ಸಂಚಾರ ನಡೆಸಬೇಕು ಎಂದು ಸೂಚಿಸಿದರು.

ಸಾರಿಗೆ ಘಟಕದಲ್ಲಿ 19 ಸಿಬ್ಬಂದಿಗಳು ಕೊರತೆಯಾಗಿದ್ದು. ಮಾರ್ಗ ನಿರ್ವಹಣೆಯಲ್ಲಿ ತೊಡಕಾಗಿದ್ದು. ಸಮರ್ಪಕ ಸೇವೆ ಒದಗಿಸಲಾಗಿದೆ ಎಂದು ಘಟಕದ ಅಧಿಕಾರಿ ಸಂತೋಷ್ ನಾಯ್ಕ್ ತಿಳಿಸಿದರು.

ಕಳೆದ ಸಭೆಯಲ್ಲಿ ಸಮಗ್ರ ಮಾಹಿತಿಯನ್ನು ತೆಗೆದುಕೊಂಡು ಬರಲು ಆಹಾರ ಇಲಾಖೆ ಅಧಿಕಾರಿಗಳಿಗೆ ತಿಳಿಸಲಾಗಿತ್ತು ಆದರೆ ಅವರು ಗೈರು ಹಾಜರಿಯಾಗಿದ್ದಾರೆ ಅವರಿಗೆ ನೋಟಿಸ್ ನೀಡುವಂತೆ ತಾಲೂಕ್ ಸಮಿತಿಯ ಎಸ್ ಎ. ಸಂತೋಷ್,,ಜಿ ಗಿರೀಶ್ ಸೂಚಿಸಿದರು.

ತಾ ಪಂ ಇ ಓ ಪಿ.ವಿಶ್ವನಾಥ್ ಮಾತನಾಡಿ ಸರ್ಕಾರದ ಐದು ಗ್ಯಾರಂಟಿಗಳು ಬಡ ಜನರಿಗೆ ಅನುಕೂಲವಾಗಿವೆ . ಐದು ಗ್ಯಾರಂಟಿಗೆ ಅಧಿಕಾರಿಗಳು ಸಮಗ್ರ ಮಾಹಿತಿ ನೀಡಿರುವುದು ಸಂತೋಷ. ಆದರೆ ಕೆಲವೊಂದು ಬಾರಿ ಸಣ್ಣ ಪುಟ್ಟ ತಪ್ಪುಗಳು ಆಗುತ್ತವೆ. ಅವುಗಳ ನ್ಯೂನ್ಯತೆಗಳನ್ನು ತಿದ್ದಿಕೊಂಡು ಹೋಗಬೇಕು ಎಂದರು.

ಈ ಸಂದರ್ಭದಲ್ಲಿ ಜೆಸ್ಕಾಂ ಇಲಾಖೆಯ ಎ ಇ ಇ ನಾಗರಾಜ್ ಕುರೇಕುಪ್ಪ, ಸಿಡಿಪಿಓ ಬೋರೇಗೌಡ, ಸಮಿತಿಯ ಸದಸ್ಯರಾದ ಉಲವತ್ತಿ ರಾಘವೇಂದ್ರ, ವೆಂಕಟೇಶ್ ನಾಯ್ಕ್, ಸರ್ದ ರಾಮಣ್ಣ ಸದ್ದಾಂ ಹುಸೇನ್, ಪ್ರಕಾಶ,ಉಪ್ಪಾರ್ ಕಾರ್ತಿಕ್ , ಸುಧಾ,ನಾಗಮ್ಮ ಇದ್ದರು.

# ಮಾಧ್ಯಮಗಳ ವೈಭವೀಕೃತ ಸುದ್ದಿ ನಿರೂಪಣೆ.... ಒಂದು ವಿವೇಚನೆ

ಕೆಲವು ದಿನಗಳಿಂದ ಪತ್ರಿಕೆಗಳಲ್ಲಿ ಪ್ರಕಟವಾಗುತ್ತಿರುವ ಸ್ಮೃತಿ ಮಂದಾನ ಅವರ ಹೇಳಿಕೆಯು ನಮ್ಮ ದೇಶವಷ್ಟೇ ಅಲ್ಲ ಇಡೀ ಜಗತ್ತಿನ ಜನರ ಮನಸ್ಥಿತಿ ಹೇಗೆ ಬದಲಾಗುತ್ತಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಸಮಾಜದ ವಿಕೃತ ಮಾನಸಿಕತೆಯು ದೇಶ, ಭಾಷೆಯನ್ನು ಮೀರಿ ವ್ಯಕ್ತಿತ್ವವನ್ನು ಹನನ ಮಾಡುವಲ್ಲಿ ನಿರತವಾಗಿದೆ ಎಂದರೆ ತಪ್ಪಿಲ್ಲ.

ಸ್ಮೃತಿ ಮಂದಾನ ಅವರ ಬದುಕಿನಲ್ಲಿ ನಡೆಯಿತು ಎನ್ನಲಾದ ವೈಯುಕ್ತಿಕ ಘಟನೆಯನ್ನು ಹಾಟ್ ಕೇಕ್ ಎಂಬಂತೆ ಮಾಧ್ಯಮದಲ್ಲಿ ಪ್ರಚಾರ ಮಾಡಿದ್ದೇ ಮಾಡಿದ್ದು. ತಮ್ಮ ವೈಯುಕ್ತಿಕ ತೆವಲಿಗಾಗಿ ಒಬ್ಬರ ಬದುಕಿನ ಅತ್ಯಂತ ವೈಯುಕ್ತಿಕ ಘಟನೆಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿ ಪರ, ವಿರೋಧ ಮಾತುಗಳನ್ನು ಆಡುತ್ತಾ ಅವರು ಬದುಕಿರುವಾಗಲೇ ಅವರ ಚಾರಿತ್ರ್ಯದ ಪೋಸ್ಟ್ ಮಾರ್ಟಂ ಮಾಡಿದ ಅಸಭ್ಯ, ಅನುಚಿತವಾದ ವರ್ತನೆ ಬಹುತೇಕ ಜಾಲತಾಣಿಗರದಾಗಿತ್ತು.

ಇನ್ನು ಮಾಧ್ಯಮಗಳು ಜನರ ಯೋಚನೆಗಿಂತ ಸಾವಿರ ಪಾಲು ಹೆಚ್ಚು ತೋರಿಸುವದನ್ನೇ ತಮ್ಮ ಕಸುಬಾಗಿಸಿಕೊಂಡಿದ್ದಾರೆ. ಯಾವುದು ಹೆಚ್ಚು ಬಿಕರಿಯಾಗುತ್ತದೆಯೋ ಅದನ್ನೇ ಹೆಚ್ಚು ಪ್ರಸಾರ ಮಾಡಬೇಕು ಎಂಬ ಚಾನಲ್ ನ ಟಿ ಆರ್ ಪಿ ಯ ವೈಯುಕ್ತಿಕ ಅನುಕೂಲವನ್ನು ಹೊರತುಪಡಿಸಿ ಮತ್ತಾವುದನ್ನು ಕಣ್ಣೆತ್ತಿಯೂ ನೋಡದ ಗಾಂಧಾರಿಯ ಕುರುಡುತನ ಹಾಗೂ ಅಂಧ ಧೃತರಾಷ್ಟ್ರನ ಪುತ್ರ ವ್ಯಾಮೋಹ ಅದರದ್ದು. ದೃಶ್ಯಮಾಧ್ಯಮಗಳು ಹೇಗಿರಬೇಕು ಎಂದರೆ ಬೆತ್ತಲೆಯನ್ನು ಕೂಡ ವೈಭವೀಕರಿಸುವಂತಹ ರೀತಿಗಳು.

ನೀತಿ ಎಂದರೇನು?! ಆ ಪದದ ಅರ್ಥವೇ ಅವರಿಗೆ ಗೊತ್ತಿಲ್ಲ. ಜಾಲತಾಣಗಳಲ್ಲಿ ನಮ್ಮ ಪ್ರತಿಕ್ರಿಯೆ ಹೇಗಿರಬೇಕು ಎಂದು ಗೊತ್ತಿದ್ದು ಕೂಡ ಮತ್ತೊಬ್ಬರ ವೈಯುಕ್ತಿಕ ಬದುಕನ್ನು ಕೆದಕಿ ನೋಡುವುದಲ್ಲದೇ ತಮ್ಮ ವೈಯುಕ್ತಿಕ ಗ್ರಹಿಕೆಗಳನ್ನು ಕಮೆಂಟ್ಗಳ ಮೂಲಕ ತುರುಕುವುದು. ಬಹುಶಹ ಸ್ಮೃತಿ ಮಂದಾನ ತನ್ನ ಮದುವೆ ಮುರಿದದ್ದಕ್ಕಿಂತ ಹೆಚ್ಚು ಮಾಧ್ಯಮಗಳ ಹಾಗೂ ಜಾಲತಾಣಗಳ ಸುದ್ದಿ ಸಂಭ್ರಮದಿಂದ ನೊಂದದ್ದೇ ಹೆಚ್ಚಾಗಿರಬಹುದು.

ಪುಂಖಾನುಪುಂಖವಾಗಿ ಸುದ್ದಿಗಳನ್ನು ಶಂಖದಂತೆ ತಿದಿಯೊತ್ತಿ ಊದುವುದೇ ಪ್ರಸ್ತುತ ದಿನಮಾನಗಳಲ್ಲಿ ಸಾಮಾನ್ಯವಾಗಿದ್ದು ಒಬ್ಬರ ವೈಯುಕ್ತಿಕ ಬದುಕಿನಲ್ಲಿ ಹಣಿಕಿ ನೋಡುವುದು ಎಷ್ಟರಮಟ್ಟಿಗೆ ಸರಿ ಎಂಬುದನ್ನು ಅರಿಯದೆ ಇರುವಷ್ಟು ನಾವು ಮೂಢರಾಗಿದ್ದೇವೆ. ಅದರಲ್ಲೂ ಸಾರ್ವಜನಿಕ ಜೀವನದಲ್ಲಿ ಇರುವ ವ್ಯಕ್ತಿಗಳ ಬದುಕನ್ನು ಓಡಾಟವನ್ನು ಇನ್ನಷ್ಟು ಮತ್ತಷ್ಟು ಕುಂತಲ್ಲಿ, ನಿಂತಲ್ಲಿ, ಊಟ ತಿಂಡಿ ಮಾಡುವುದರಿಂದ ಹಿಡಿದು, ದೊಡ್ಡ ದೊಡ್ಡ ಹೋಟೆಲ್ಗಳ, ಮಾಲ್ ಗಳ, ಬಾರುಗಳ, ಪಬ್ಬುಗಳತನಕ, ಏರ್ಪೋರ್ಟ್ ಗಳಲ್ಲಿ ನಡೆದು ಬರುವವರೆಗೆ{ ಹೌದು ಕೆಲ ತಾರೆಯರು ವ್ಯಕ್ತಪಡಿಸಿದ ಹಾಗೆ ತಮ್ಮನ್ನು ಏರ್ಪೋರ್ಟ್ಗಳಲ್ಲಿ ಇನ್ನಿಲ್ಲದಂತೆ ಹಿಂಬಾಲಿಸುವ ಕಾರಣ ಅಲ್ಲೂ ಕೂಡ ತಾವು ಎಚ್ಚರಿಕೆಯ ಹೆಜ್ಜೆಯನ್ನು ಹಾಗೂ ಸಹನೆಯ ಭಾವವನ್ನು ಹೊಂದಿರಲೇಬೇಕು (ಮತ್ತೆ ಕೆಲವರು ಬೇಕೆಂದೇ ತಾವು ಬರುವ ಸಮಯವನ್ನು ಮಾಧ್ಯಮದವರಿಗೆ ತಿಳಿಯಪಡಿಸುತ್ತಾರೆ ಅದು ಅವರ ವೈಯುಕ್ತಿಕ ವಿಚಾರ) ಅವರ ಬದುಕಿನ ಪ್ರತಿಯೊಂದು ಘಟನೆಯನ್ನು ಜನರ ಮುಂದಿಡುವ ಮೂಲಕ ತಾವೇನೋ ದೊಡ್ಡ ವಿಷಯವನ್ನು ಸಾಧಿಸಿದ್ದೇವೆ ಎಂಬ ಭ್ರಮೆಯನ್ನು ಹೊತ್ತ ಕೆಲ ಮಾಧ್ಯಮದ ಜನರಿಗೆ ಇದೇ ಅವಘಡ ತಮ್ಮ ಮನೆಯಲ್ಲಿ ಆದರೆ ಇಷ್ಟೇ ಸಹಜವಾಗಿ ಅದನ್ನು ಸ್ವೀಕರಿಸುವ ಮನಸ್ಥಿತಿ ತಮಗೂ ಇರುತ್ತದೆಯೇ ಎಂದು ಕೇಳಬೇಕೆನ್ನಿಸುತ್ತದೆ... ಅಲ್ಲವೇ?

ಭಾರತದ ಮಹಿಳಾ ಕ್ರಿಕೆಟ್ ತಂಡದಲ್ಲಿ ಅತ್ಯಂತ ಪ್ರಮುಖ ಸ್ಥಾನದಲ್ಲಿರುವ ಸ್ಮೃತಿ ಮಂದಾನ ಅವರ ಆಟದ ವೈಖರಿಯನ್ನು ಒಮ್ಮೆಯಾದರೂ ಬಾಯಿ ತುಂಬ ಹೊಗಳದ, ಟೀಕೆ ಟಿಪ್ಪಣಿಗಳನ್ನು ಮಾಡದ ಎಲ್ಲ ಬಗೆಯ ದೃಶ್ಯ ಮಾಧ್ಯಮಗಳು, ಸಾಮಾಜಿಕ ಜಾಲತಾಣಗಳೆಂಬ ವಿಶ್ವವಿದ್ಯಾಲಯಗಳು ಮಹಿಳಾ ಕ್ರಿಕೆಟ್ ನ ವಿಶ್ವಕಪ್ ಎತ್ತಿ ಹಿಡಿದ ತಂಡದ ಪ್ರಮುಖ ಆಟಗಾರ್ತಿ ಸ್ಮೃತಿ ಮಂದಾನ ಅವರ ಬದುಕನ್ನು ಮಾತ್ರ ಹತ್ತಿಯ ಅರಳಿಯಂತೆ ಹಿಂಜಿ ಹಿಂಜಿ ಸುದ್ದಿಯನ್ನು ಹಂಚುವ ತಮ್ಮ ತೆವಲಿಗೆ ಬಲಿ ಕೊಟ್ಟರು.

ಸ್ಮೃತಿ ಮಂದಾನ ಹಾಗೂ ಆಕೆಗೆ ನಿಶ್ಚಿತನಾಗಿದ್ದ ವರ ಪತ್ರಿಕಾ ಹೇಳಿಕೆಯನ್ನು ನೀಡಿ ತಮ್ಮ ಮದುವೆ ರದ್ದಾದದ್ದು ಒಂದು ಅತ್ಯಂತ ವೈಯುಕ್ತಿಕ ನಿರ್ಧಾರವಾಗಿದ್ದು ತಮ್ಮ ಎರಡು ಕುಟುಂಬಗಳ ಒಪ್ಪಿಗೆಯ ಮೇರೆಗೆ ಈ ನಿರ್ಧಾರವನ್ನು ಕೈಗೊಂಡಿದ್ದು ವೈಯುಕ್ತಿಕತೆಯನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಮಾಧ್ಯಮದವರು ಇದನ್ನು ವೈಭವೀಕರಿಸುವ ಅಗತ್ಯ ಇರಲಿಲ್ಲ ಎಂದು ಹೇಳಿಕೆಯನ್ನು ಬಿಡುಗಡೆ ಮಾಡುವಷ್ಟರಮಟ್ಟಿಗಿನ ಲಜ್ಜೆಗೇಡಿತನ ಅವರದಾಗಿತ್ತು ಮಹಾರಾಷ್ಟ್ರದ ಅತ್ಯಂತ ಪುಟ್ಟ ಜಿಲ್ಲೆ ಸಾಂಗ್ಲಿಯ ಸ್ಮೃತಿ ಮಂದಾನ ಇದುವರೆಗೆ ತನ್ನ ವೃತ್ತಿ ಜೀವನದಲ್ಲಿ ಸಾಧಿಸಿದ ಸಾಧನೆಗಳಿಗಿಂತ ಹೆಚ್ಚು ಆಕೆಯ ವೈಯುಕ್ತಿಕ ಜೀವನದ ಘಟನೆ ಸುದ್ದಿ ಮಾಡಿ ಸಾರ್ವಜನಿಕರ ಗಮನವನ್ನು ಸೆಳೆದಿದೆ.

ಸಾಮಾಜಿಕ ಜಾಲತಾಣಗಳು ತಮ್ಮ ಪರಿಮಿತಿಯನ್ನು ಮೀರಿ ಈ ರೀತಿ ವರ್ತಿಸುತ್ತಿರುವುದು ಇದೇ ಮೊದಲ ಬಾರಿ ಏನಲ್ಲ. ಡಿಸೆಂಬರ್ 7ರಂದು ಸ್ಮೃತಿ ಮಂದಾನ ಹಾಗೂ ಪಲಾಶ್ ಮುಚ್ಚಳ್ ಎರಡು ಬೇರೆ ಬೇರೆ ಸಮಯದಲ್ಲಿ ಪತ್ರಿಕಾ ಹೇಳಿಕೆಗಳನ್ನು ನೀಡಿ ತಮ್ಮ ವೈಯುಕ್ತಿಕತೆಯನ್ನು ಗೌರವಿಸಿ ಎಂದು ಕೇಳಿಕೊಳ್ಳುವಷ್ಟರ ಮಟ್ಟಿಗೆ ಇವರ ವರ್ತನೆ ಮೀರಿ ಹೋಗಿತ್ತು ಎಂಬುದು ಬೇಸರದ ಸಂಗತಿ.

ಅದೆಷ್ಟೇ ಸಾರ್ವಜನಿಕ ಜೀವನದಲ್ಲಿರುವ ವ್ಯಕ್ತಿಯೋರ್ವ ತನ್ನ ಬದುಕಿನ ಅತಿ ದೊಡ್ಡ ಸಂಭ್ರಮವು ಅತ್ಯಂತ ವೈಯುಕ್ತಿಕ ದುರ್ಘಟನೆಯಾಗಿ ದಾಖಲಾದಾಗ ಅದೆಷ್ಟು ನೋವು ಅವಮಾನಗಳನ್ನು ಅನುಭವಿಸುತ್ತಾರೆ ಎಂಬುದರ ಅರಿವನ್ನು ಹೊಂದದೆ ಇರುವಷ್ಟು ನಮ್ಮ ಮಾನವೀಯ ಪ್ರಜ್ಞೆ ಕುಸಿದು ಹೋಗಿದೆಯೇ? ಇನ್ನು ಮುಂದಾದರೂ ನಮಗೆ ನಾವು ಪ್ರಾಮಾಣಿಕವಾಗಿರೋಣ. ತನ್ನ ವೃತ್ತಿ ಜೀವನದ ಯಶಸ್ಸಿನ ಉತ್ತುಂಗದ ಸಮಯವನ್ನು ಮತ್ತಷ್ಟು ಸಂತಸಕರವಾಗಿಸಿಕೊಳ್ಳುವ ನಿಟ್ಟಿನಲ್ಲಿ ಶೃತಿ ಮದುವೆಯ ತಯಾರಿ ನಡೆದಿದ್ದು ವೃತ್ತಿ ಜೀವನದ ಯಶಸ್ಸು ಆಕೆಯ ವೈಯಕ್ತಿಕ ಜೀವನವನ್ನು ಕಳೆದುಕೊಳ್ಳುವಷ್ಟರ ಮಟ್ಟಿಗೆ ಬೆಲೆ ತರಬೇಕಾಯಿತು.

ಈ ದೇಶ ಕಂಡ ಅತ್ಯಂತ ಪ್ರತಿಭಾನ್ವಿತ ಕ್ರಿಕೆಟಿಗರಲ್ಲಿ ಒಬ್ಬರಾದ ಸ್ಮೃತಿ ಮಂದಾನ ಮೈದಾನದಲ್ಲಿ ಏನು ಮಾಡುತ್ತಾರೆ ಎಂಬುದನ್ನು ಮಾತ್ರ ನಾವು ಗಮನಿಸೋಣ, ಆಕೆಯ ಆಟದ ದಾಖಲೆಗಳತ್ತ ನಮ್ಮ ಗಮನ ಇರಲಿ ವಿಶ್ವಕಪ್ ನ ಸಂಭ್ರಮ ಆಕೆಯ ಬದುಕಿನಲ್ಲಿ ತಂದ ಬದಲಾವಣೆಗಳ ಕುರಿತು ನಮ್ಮ ಆಸಕ್ತಿ ಇರಲಿ. ಮುಂದಿನ ದಿನಮಾನಗಳಲ್ಲಿ ಆಕೆಯ ಕ್ರೀಡಾ ಚಟುವಟಿಕೆ ಯಾವ ರೀತಿಯ ತಿರುಗಳನ್ನು ತೆಗೆದುಕೊಳ್ಳುತ್ತದೆ ಎಂಬುದರ ಕುರಿತು ನಮ್ಮ ನಿರೀಕ್ಷೆಗಳಿರಲಿ ಹೊರತು ಆಕೆಯ ವೈಯುಕ್ತಿಕ ಬದುಕಿನ ಏರಿಳಿತಗಳ ಕುರಿತಲ್ಲ.



ಆಕೆಯು ನಮ್ಮ ನಿಮ್ಮಂತೆ ಸಾಮಾನ್ಯ ಮನುಷ್ಯಳು. ತನ್ನ ಸಾಧನೆ ಮತ್ತು ಪ್ರಯತ್ನಗಳ ಮೂಲಕ ಜಾಗತಿಕ ಸ್ಥಾನಮಾನವನ್ನು ಗಳಿಸಿಕೊಂಡಿದ್ದರು ಆಕೆ ಕೂಡ ಮಾನವೀಯ ಭಾವನೆಗಳನ್ನು ಒಳಗೊಂಡ ಹೆಣ್ಣುಮಗಳು ಎಂಬುದನ್ನು ಮರೆಯದೆ ಇರೋಣ. ಇಂತಹ ವಿಷಯಗಳನ್ನು ಆಕೆಯ ವೈಯುಕ್ತಿಕ ಬದುಕು ಎಂದು ಕೈಬಿಟ್ಟರೆ ನೀವು ಹಳೆಯ ಕಾಲದವರು ಎಂದು ನಿಮ್ಮನ್ನು ಮೂದಲಿಸಬಹುದು ಇಂತಹ ವಿಷಯಗಳನ್ನು ಕುರಿತು ಅತಿಯಾಗಿ ಚರ್ಚಿಸದೆ ಹೋದರೆ ನೀವು ಇಂದಿನ ಯುವ ಜನತೆ ಹೇಳುವ ರೀತಿಯ ಕೂಲ್ ಅಲ್ಲದೆ ಹೋಗಬಹುದು ನೀವು ಸಾಮಾಜಿಕ ಜಾಲತಾಣದ ಮೂರ್ಖರು ಎನಿಸಿಕೊಳ್ಳಬಹುದು.

ತನ್ನ ವೈಯಕ್ತಿಕ ಸಾಧನೆಯ ಮೂಲಕ ಅತಿ ದೊಡ್ಡ ಎತ್ತರವನ್ನು ಕ್ರಮಿಸಿದ ಸ್ಮೃತಿ ಮಂದಾನ ರಸ್ತೆ ಬದಿಯ ಕೀಳು ಅಭಿರುಚಿಯ ಮಾತುಕತೆಗಳಿಂದ ಕುಸಿದು ಹೋಗದೆ ಇರುವಂತೆ ಆಕೆಯ ವ್ಯಕ್ತಿತ್ವದ ಘನತೆಯನ್ನು ಉಳಿಸುವುದು ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯ ಕೈಯಲ್ಲಿ ಚಾಕು ಇದ್ದರೆ ಹಣ್ಣು ಮತ್ತು ತರಕಾರಿಗಳನ್ನು ಸುಂದರವಾಗಿ ಕೆತ್ತಿ ಪ್ರದರ್ಶನಕ್ಕೂ ಇಡಬಹುದು ಒಬ್ಬರನ್ನೂ ಚುಚ್ಚಿ ಗಾಯಗೊಳಿಸಲೂಬಹುದು.ಅಂತೆಯೇ ಸಾಮಾಜಿಕ ಜಾಲತಾಣಗಳು ಹಾಗೂ ದೃಶ್ಯ ಮಾಧ್ಯಮಗಳು ಇರುವುದು ವ್ಯಕ್ತಿತ್ವದ ಘನತೆಯನ್ನು ಎತ್ತಿ ಹಿಡಿಯಲೇ ಹೊರತು ಕೀಳು ಅಭಿರುಚಿಯನ್ನು ತೋರಿಸಲು ಅಲ್ಲ ಎಂಬುದನ್ನು ಮರೆಯದೆ ಇರೋಣ. ಏನಂತೀರಾ ಸ್ನೇಹಿತರೆ ?

**ವೀಣಾ ಹೇಮಂತ್ ಗೌಡ ಪಾಟೀಲ್ ಮುಂಡರಗಿ ಗದಗ್**

# ಗೋಟೂರು: ಸಿದ್ಧಾರ್ಥ ಪಿಯು ಕಾಲೇಜಿನ ಎನ್ಎಸ್ಎಸ್ ಶಿಬಿರ



**ಕಲಬುರಗಿ,ಡಿ.12–** ಶಿಕ್ಷಣ ಜೊತೆಗೆ ಸೇವೆ ಮತ್ತು ಸಮಾಜಕ್ಕಾಗಿ ನಾವು ಎಂಬ ಧ್ಯೆಯೋದ್ದೇಶದೊಂದಿಗೆ ರಾಷ್ಟ್ರ ಕಟ್ಟುವ ಕೆಲಸದಲ್ಲಿ ಎನ್ ಎಸ್ ಎಸ್ ಪ್ರಮುಖ ಪಾತ್ರ ವಹಿಸಿದೆ. ನೈರ್ಮಲ್ಯ,ಶಿಕ್ಷಣ ಆರೋಗ್ಯ, ಕೃಷಿ ಮತ್ತು ಆರ್ಥಿಕ ಕ್ಷೇತ್ರದಲ್ಲಿ ಸಮೃದ್ಧಿ ಹೊಂದಲು ಗ್ರಾಮೀಣ ಜನರಿಗೆ ಜಾಗೃತಿ ಮೂಡಿಸುವ ಕಾರ್ಯದಲ್ಲಿ ವಿದ್ಯಾರ್ಥಿ–ಯುವಜನಾಂಗ ಶ್ರಮಿಸಬೇಕೆಂದು ಎನ್ ಎಸ್ ಎಸ್ ವಿಭಾಗೀಯ ಅಧಿಕಾರಿ ಡಾ. ಚಂದ್ರಶೇಖರ್ ದೊಡ್ಡಮನಿ ಅಭಿಪ್ರಾಯಪಟ್ಟರು.

ಕಾಳಗಿ ಸಿದ್ಧಾರ್ಥ ಪದವಿ ಪೂರ್ವ ಕಾಲೇಜಿನ ಎನ್ ಎಸ್ ಎಸ್ ಘಟಕದ ವತಿಯಿಂದ ಗೋಟೂರು ಗ್ರಾಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ಪ್ರಜ್ಞೆ ಮತ್ತು ಪರಿಶ್ರಮದಿಂದ ಓದಬೇಕು. ಬಹುಮುಖ ವ್ಯಕ್ತಿತ್ವ ಬೆಳಸಿಕೊಂಡು ವಿದ್ಯಾರ್ಥಿಗಳು ಜ್ಞಾನದ ಚಿಲುಮೆಯಾಗಬೇಕು ಎಂದರು. ಎನ್ ಎಸ್ ಎಸ್ ಶಿಬಿರ ಉದ್ದೇಶಿಸಿ ಗ್ರಾಮ ಪಂಚಾಯತ್ ಅಧ್ಯಕ್ಷ ಶಿವಕುಮಾರ್ ಕಮಕನೂರ, ಪ್ರಭು ಬಾವಿ, ಸಿದ್ದಪ್ಪ ಶೆಟ್ಟಿ ಮುಂತಾದವರು ಮಾತನಾಡಿದರು. ಪ್ರಾಚಾರ್ಯಶಾಂತಕುಮಾರ್ ಪ್ರಾಸ್ತವಿಕವಾಗಿ ಮಾತನಾಡಿದರು. ಸಹಾಯಕ ಪ್ರಾಧ್ಯಾಪಕ ಡಾ. ಶಂಕರ ಬಿ. ಕೊಡದೂರ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಅವಿನಾಶ ಮೂಲಿಮನಿ, ಪರಮೇಶ್ವರ್ ರೆಡ್ಡಿ, ಮಲ್ಲಿಕಾರ್ಜುನ ಸಿಂಗೆ,ಬಾಬು ಬುಡನೋರ, ಸಿಬ್ಬಂದಿ ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.ವಿದ್ಯಾರ್ಥಿಗಳು ಪುಷ್ಪ ವೃಷ್ಟಿಮಾಡಿ ಸ್ವಾಗತಿಸಿದರು.ಅರ್ಚನಾ ಕೋರವಾರ ನಿರೂಪಿಸಿದರು.ಪರವಿನಾ ವಂದಿಸಿದರು.

# ಬೆಂಬಲ ಬೆಲೆಯಲ್ಲಿ ತಕ್ಷಣ ತೊಗರಿ ಖರೀದಿ ಕೇಂದ್ರ ಆರಂಭಿಸಿ : ತೇಲ್ಕೂರ

**ಕಲಬುರಗಿ,ಡಿ.12–** ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದ್ದರಿಂದ ರಾಜ್ಯ ಸರ್ಕಾರ ಮೀನಾ ಮೇಷ ಏಣಿಸದೇ ಈ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಮಾಜಿ ಶಾಸಕ, ರಾಜಕುಮಾರ ಪಾಟೀಲ್ ತೇಲ್ಕೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕೇಂದ್ರ ಸರ್ಕಾರ ಪ್ರಸಕ್ತವಾಗಿ ತೊಗರಿ ಖರೀದಿಗೆ ಒಪ್ಪಿಗೆ ನೀಡಿದ್ದಕ್ಕೆ ಹರ್ಷ ವ್ಯಕ್ತಪಡಿಸಿ ಕೇಂದ್ರ ಸರ್ಕಾರ 9.67 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಕೇಂದ್ರ ಅನುಮತಿ ನೀಡಿದ್ದನ್ನು ಸ್ವಾಗತಿಸಿದ್ದಾರೆ. ಕೇಂದ್ರದ ಅನುಮತಿ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಿನಿಂದಲೇ ರೈತರ ನೊಂದಣಿ ಪ್ರಕ್ರಿಯೆ ಆರಂಭಿಸಿ ವಾರದೊಳಗೆ ತೊಗರಿ ಖರೀದಿ ಶುರು ಮಾಡಬೇಕೆಂದಿದ್ದಾರೆ.

ಅತಿವೃಷ್ಟಿ ಯಿಂದ ತೊಗರಿ ಬೆಳೆ ಹಾನಿಯಾಗಿ ಅಲ್ಲಲ್ಲಿ ಅಲ್ಪ ಸ್ವಲ್ಪ ಬೆಳೆ ಉಳಿದು ರಾಶಿಯಾಗುತ್ತಿದೆ. ಆದರೆ ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆಯಿದ್ದು, ಕ್ವಿಂಟಾಲ್ ತೊಗರಿಗೆ ಕೇವಲ 7000 ರೂ. ದರದಲ್ಲಿ ಮಾರಾಟವಾಗುತ್ತಿದೆ. ರೈತರಿಗೆ ಕ್ವಿಂಟಾಲ್ ಗೆ 9000 ರೂ. ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಜತೆಗೆ ಮಾರುಕಟ್ಟೆಯಲ್ಲೂ ದರ ಹೆಚ್ಚಳಕ್ಕೆ ಕಾರಣವಾಗುತ್ತದೆ. ಹೀಗಾಗಿ ರಾಜ್ಯ ಸರ್ಕಾರ ಪ್ರತಿ ಕ್ವಿಂಟಾಲ್ ಗೆ ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿ ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಪ್ರಾರಂಭಿಸಬೇಕು. ಕೇಂದ್ರದ ಬೆಂಬಲ ಬೆಲೆ ಕ್ವಿಂಟಾಲ್ ಗೆ 8 ಸಾವಿರ ರೂ ಇದ್ದು, ರಾಜ್ಯ ಸರ್ಕಾರ 1 ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿದರೆ ಕ್ವಿಂಟಾಲ್ ಗೆ 9 ಸಾವಿರ ರೂ ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದು ತೇಲ್ಕೂರ ಆಗ್ರಹಿಸಿದ್ದಾರೆ.

ಪ್ರಸಕ್ತವಾಗಿ ಅತಿವೃಷ್ಟಿಯಿಂದ ಬೆಳೆಗಳು ಹಾಳಾಗಿ ರೈತ ತೊಂದರೆಯಲ್ಲಿರುವುದು ಎಲ್ಲರಿಗೂ ತಿಳಿದ ವಿಷಯ. ಹೀಗಾಗಿ



ಸರ್ಕಾರ ಇಷ್ಟೊತ್ತಿಗೆ ಬೆಳೆ ಹಾನಿ ಪರಿಹಾರವನ್ನು ಸಂಪೂರ್ಣವಾಗಿ ರೈತರ ಖಾತೆಗೆ ಜಮಾ ಮಾಡಬೇಕಿತ್ತು. ಮೂರು ಇಲ್ಲವೇ ಆರೇಳು ಸಾವಿರ ರೂ ಮಾತ್ರ ಹಾಕಲಾಗಿದೆ. ಎನ್ ಡಿಆರ್ ಎಫ್ ನಿಯಮಾವಳಿ ಅಡಿ ಪ್ರತಿಯೊಬ್ಬ ರೈತರಿಗೆ ಕೇಂದ್ರ ಸರ್ಕಾರದವೇ ಹೆಕ್ಟೇರ್ ಗೆ 8500 ರೂ. ನಂತೆ ಎರಡು ಹೆಕ್ಟೇರ್ ಸೇರಿ 17000 ರೂ ನೀಡಲಾಗುತ್ತದೆ. ಅದರ ಜತೆಗೆ ರಾಜ್ಯ ಸರ್ಕಾರದ್ದು ಸೇರಿದರೆ 34000 ರೂ. ಆಗುತ್ತದೆ. ಆದ್ದರಿಂದ ಪ್ರತಿ ರೈತಗೆ 34 ಸಾವಿರ ರೂ ಪರಿಹಾರ ನೀಡಬೇಕು. ಇಲ್ಲದಿದ್ದರೆ ರಾಜ್ಯ ಸರ್ಕಾರದ ಬೊಕ್ಕಸ್ ಖಾಲಿಯಾಗಿದೆ ಎಂಬುದಾಗಿ ತಿಳಿದುಕೊಳ್ಳಬೇಕಾಗುತ್ತದೆ. ಎಂದಿದ್ದಾರೆ.ಪ್ರಸಕ್ತವಾಗಿ ಕೇಂದ್ರದ ಪ್ರಧಾನ ಮಂತ್ರಿ ಫಸಲು ವಿಮಾ ಯೋಜನೆ ಅಡಿ ಅತಿ ಹೆಚ್ಚಿನ ರೈತರು ಬೆಳೆವಿಮೆ ಮಾಡಿಸಿದ್ದಾರೆ. ಹೀಗಾಗಿ ತೊಗರಿ ಬೆಳೆ ಹಾಳಾಗಿದ್ದರಿಂದ ನೂರಕ್ಕೆ ನೂರಷ್ಟು ಬೆಳೆ ವಿಮೆ ದೊರಕುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲಾಡಳಿತ ಮುಂದಾಗಬೇಕು. ಕನಿಷ್ಠ ಸಾವಿರ ಕೋ.ರೂ. ಯಾದರೂ ಜಿಲ್ಲೆಯ ರೈತರಿಗೆ ಬೆಳೆವಿಮೆ ದೊರಕಬೇಕೆಂದಿದ್ದಾರೆ

# 60 ವರ್ಷ ಹಳೆಯ ಅರಕೇರಾ.ಕೆ ತಾಂಡಾ ಶಾಲೆ ಮುಚ್ಚುವುದಕ್ಕೆ ಪೋಷಕರ ವಿರೋಧ

**ಯಾಗದಿರಿ,ಡಿ.12–** ಕೆಪಿಎಸ್ ಮ್ಯಾಗ್ನೆಟ್ ಶಾಲೆ ಹೆಸರಿನಲ್ಲಿ ರಾಜ್ಯದ 40,000 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗಿರುವ ರಾಜ್ಯ ಸರ್ಕಾರದ ವಿರುದ್ಧ ಹಾಗೂ ಯಾದಗಿರಿ ಜಿಲ್ಲೆಯ ಅರಕೇರಾ.ಕೆ ತಾಂಡಾ (ಬಸವನ ತಾಂಡಾ) ದ 6 ದಶಕಗಳ ಇತಿಹಾಸ ಇರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಉಳಿಸಬೇಕು ಎಂದು ತಾಂಡಾದ ಪೋಷಕರು ವಿದ್ಯಾರ್ಥಿಗಳು ಸೇರಿ ಎಐಡಿಎಸ್ಒ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ಉದ್ದೇಶಿಸಿ ಎಐಡಿಎಸ್ಒ ರಾಜ್ಯ ಸಮಿತಿ ಸದಸ್ಯ ನಾಗರಾಜ್ ಮಾತನಾಡುತ್ತಾ ರಾಜ್ಯ ಸರ್ಕಾರವು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಿನಡಿಯಲ್ಲಿ ರಾಜ್ಯದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಹುನ್ನಾರ ನಡೆಸಿದೆ ಒಟ್ಟು ರಾಜ್ಯದಲ್ಲಿ 40,000 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುವ ಯೋಜನೆ ಇದಾಗಿದೆ. ಈ ಯೋಜನೆಯಂತೆ ಯಾದಗಿರಿ ತಾಲೂಕಿನ ಅರಕೇರಾ. ಕೆ ಗ್ರಾಮದ ಸರ್ಕಾರಿ ಪ್ರಾಢ ಶಾಲೆಯನ್ನು ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಿದ್ದು, ಈ ಶಾಲೆಗೆ ಇದರ ಸುತ್ತಮುತ್ತ ಬರುವ ಹಳ್ಳಿಗಳ ಶಾಲೆಗಳನ್ನು ವಿಲೀನಗೊಳಿಸಲಾಗುತ್ತದೆ, ಈ ಕೆಪಿಎಸ್ ಮ್ಯಾಗ್ನೆಟ್ ಶಾಲೆಯು ತಾಂಡಾದಿಂದ ಮೂರರಿಂದ ನಾಲ್ಕು ಕಿಲೋಮೀಟರ್ ದೂರದಲ್ಲಿದೆ ಅಲ್ಲಿಗೆ



ಈ ಮಕ್ಕಳು ಹೇಗೆ ಹೋಗಲು ಸಾಧ್ಯ? ಯಾವ ಕಾರಣಕ್ಕೂ ಈ ಶಾಲೆಗಳನ್ನ ಯಾವುದೇ ಕಾರಣಕ್ಕೂ ಮುಚ್ಚಬಾರದೆಂದು ಆಗ್ರಹಿಸಿದರು.

ಪ್ರತಿಭಟನೆಯ ಅಧ್ಯಕ್ಷತೆಯನ್ನು ಎಐಡಿಎಸ್ ಒ ಯಾದಗಿರಿ ಜಿಲ್ಲಾ ಸಂಚಾಲಕಿ ಶಿಲ್ಪಾ ಬಿ ಕೆ ವಹಿಸಿದ್ದರು. ಈ ಸಂದರ್ಭದಲ್ಲಿ ಲಕ್ಷ್ಮಣ್, ಅಂಬರೀಷ್, ಹಣಮಂತ ಚವ್ಹಾಣ, ರವಿ ರಾಠೋಡ್, ಅರವಿಂದ ರಾಠೋಡ್, ರಾಮು ಚವ್ಹಾಣ ಹಾಗೂ ಗ್ರಾಮದ ವಿದ್ಯಾರ್ಥಿಗಳು ಮತ್ತು ಪೋಷಕರು ಸೇರಿದಂತೆ 200 ಕ್ಕೂ ಹೆಚ್ಚು ಜನ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಬಸ್–ಜೀಪ್ ಮಧ್ಯೆ ಡಿಕ್ಕಿ: ಮೂವರು ಸ್ಥಳದಲ್ಲೇ ಸಾವು

**ಕಲಬುರಗಿ,ಡಿ.12–** ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಗೆ ಸೇರಿದ ಬಸ್ ಹಾಗೂ ಜೀಪ್ ಮಧ್ಯೆ ಡಿಕ್ಕಿ ಸಂಭವಿಸಿ ಇಬ್ಬರು ವಯೋವೃದ್ಧರು ಸೇರಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ ದಾರುಣ ಘಟನೆ ಇಲ್ಲಿನ ಅಫಜಲಪುರ ರಸ್ತೆಯ ಹಾರುತಿಹಡಗಿಲ್ ಗ್ರಾಮದ ಬಳಿ ಗುರುವಾರ ಮಧ್ಯಾಹ್ನ ಸಂಭವಿಸಿದೆ.

ಜೀಪ್ ನಲ್ಲಿ ಪ್ರಯಾಣಿಸುತ್ತಿದ್ದ ಅಫಜಲಪುರ ತಾಲೂಕಿನ ತೆಲ್ಲುಣಗಿ ಗ್ರಾಮದ ಚಂದ್ರಕಾಂತ ಶಿವರಾಯ (80) ಹಾಗೂ ಅವರ ಪತ್ನಿ ಸುಲೋಚನಾ ಚಂದ್ರಕಾಂತ (70) ಮತ್ತು ಮಿಟ್ಟುಸಾಬ್ ಪಟೇಲ್ ಸಾವನ್ನಪ್ಪಿವರು. ಇದೇ ಜೀಪ್ ನಲ್ಲಿ ಪ್ರಯಾಣಿಸುತ್ತಿದ್ದ ಶ್ರೀಶೈಲ ಭೂತಾಳೆ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಸೇರಿಸಲಾಗಿದೆ. ಈ ಮಧ್ಯೆ ಬಸ್ ನಲ್ಲಿದ್ದ ಘತ್ತರಗಾ ಗ್ರಾಮದ ವಿಜಯಲಕ್ಷ್ಮಿ ಹಾಗೂ ಬಂದರವಾಡದ ಗುರುದೇವಿ ಸಹ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಫಜಲಪುರ ಕಡೆಯಿಂದ ಕಲಬುರಗಿ ಕಡೆಗೆ ಹೊರಟಿದ್ದ ಜೀಪ್ ಎದುರಿಗೆ ಬರುತ್ತಿದ್ದ ಸಾರಿಗೆ ಸಂಸ್ಥೆ ಬಸ್ ಗೆ ಡಿಕ್ಕಿ ಹೊಡೆದಿದೆ.



ಇದೇ ವೇಳೆ ಅಪಘಾತಕ್ಕೆ ಒಳಗಾದ ಬಸ್ಸಿಗೆ ಹಿಂಬದಿಯಿಂದ ಬಂದ ಮತ್ತೊಂದು ಬಸ್ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಜೀಪ್ ನುಜ್ಜುಗುಜ್ಜಾಗಿದೆ.

ಕಲಬುರಗಿ ಪೊಲೀಸ್ ಕಮಿಷನರ್ ಡಾ.ಶರಣಪ್ಪ ಎಸ್.ಡಿ , ಸಂಚಾರ ವಿಭಾಗದ ಎಸಿಪಿ ಸುಧಾ ಆದಿ, ಸಂಚಾರ ಪೊಲೀಸ್ ಠಾಣೆ–1ರ ಇನ್ಸ್ ಪೆಕ್ಟರ್ ಶಕೀಲ್ ಅಂಗಡಿ ಹಾಗೂ ಇತರ ಸಿಬ್ಬಂದಿ ಘಟನಾ ಸ್ಥಳಕ್ಕೆ ಧಾವಿಸಿ ಪರಿಶೀಲನೆ ಕೈಗೊಂಡಿದ್ದಾರೆ. ಸಂಚಾರ ಪೊಲೀಸ್ ಠಾಣೆ–1ರಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ.

# ಸಾರ್ವತ್ರಿಕ ಆರೋಗ್ಯ ರಕ್ಷಣೆ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ



ಯುವಮಾರ್ಗ ಸುದ್ದಿ

**ಸಿಂಧನೂರು: ಡಿ 12–** ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಸನ್‌ರೈಸ್ ಗ್ರೂಪ್ ಆಫ್ ಇನ್ಸಿಟ್ಯೂಷನ್ಸ್ (ಡಿ. ಫಾರ್ಮಸಿ, ನರ್ಸಿಂಗ್, ಪ್ಯಾರಾಮೆಡಿಕಲ್ ಕಾಲೇಜು) ಹಾಗೂ ತಾಲೂಕು ಆರೋಗ್ಯ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಾರ್ವತ್ರಿಕ ಆರೋಗ್ಯ ರಕ್ಷಣೆ ದಿನದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನುವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಸನ್ಮಾನ್ಯ ನ್ಯಾಯಾಧೀಶರು ಶ್ರೀಮತಿ ರೂಪ, ಪ್ರಧಾನ ಸಿವಿಲ್ ನ್ಯಾಯಾಧೀಶರು, ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಕೆ. ಭೀಮನಗೌಡ ಅಧ್ಯಕ್ಷರು ತಾಲೂಕು ನ್ಯಾಯವಾದಿಗಳ ಸಂಘ ಸಿಂಧನೂರು ಹಾಗೂ ಎಲ್ಲಾ ಮುಖ್ಯ ಅತಿಥಿಗಳಿಗೆ ಪುಷ್ಪಾರ್ಚನೆ ಮೂಲಕ ಆತ್ಮೀಯ ಸ್ವಾಗತ ನೀಡಲಾಯಿತು.

ಉದ್ಘಾಟನಾ ಕಾರ್ಯಕ್ರಮದಲ್ಲಿ ಗಿಡಕ್ಕೆ ನೀರು ಹಾಕುವ ಮೂಲಕ ಆರೋಗ್ಯ ದಿನದ ಕಾರ್ಯಕ್ರಮಕ್ಕೆ ಸಂಕೇತಾತ್ಮಕ ಆರಂಭ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ರೂಪ ಅವರು, "ದೇವರು ಪ್ರತಿಯೊಬ್ಬರಿಗೂ ನೀಡಿರುವ ದೇಹವನ್ನು ಸರಿಯಾದ ಕ್ರಮಗಳು, ನಿಯಮಿತ ವ್ಯಾಯಾಮ ಹಾಗೂ ಆರೋಗ್ಯಕರ ಜೀವನಶೈಲಿಯಿಂದ ಕಾಪಾಡಿಕೊಂಡಾಗ ಮಾತ್ರ 'ಆರೋಗ್ಯವೇ ಭಾಗ್ಯ' ಎಂಬ ನುಡಿ ಸಾರ್ಥಕವಾಗುತ್ತದೆ" ಎಂದು ತಿಳಿಸಿದರು.

ಅಧ್ಯಕ್ಷೀಯ ಭಾಷಣದಲ್ಲಿ ಶ್ರೀ ಕೆ. ಭೀಮನಗೌಡ ವಕೀಲರು

ದಿನದ 24 ಗಂಟೆಗಳನ್ನು ಸರಿಯಾಗಿ ಮೂರು ಭಾಗಗಳಾಗಿ ಹಂಚಿಕೊಂಡು ಕೆಲಸ, ವಿಶ್ರಾಂತಿ ಮತ್ತು ಕುಟುಂಬದೊಂದಿಗೆ ಗುಣಮಟ್ಟದ ಸಮಯ ಕಳೆಯುವ ಮೂಲಕ ಶಾರೀರಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಶ್ರೀ ವಿಜಯಚಂದ್ರ ಪ್ರಭು ಬಿ, ಸಹಾಯಕ ಸರಕಾರಿ ಅಭಿಯೋಜಕರು, ಆರೋಗ್ಯ ಕಾರ್ಯಕರ್ತರ ಹಕ್ಕು ರಕ್ಷಣೆ ಹಾಗೂ ಕಾನೂನು ಪ್ರೋವಿಷನ್ಸ್ ಕುರಿತು ಮಾಹಿತಿ ನೀಡಿ, ಗುಣಮಟ್ಟದ ಸಾರ್ವಜನಿಕ ಆರೋಗ್ಯ ಸೇವೆಯನ್ನು ನಿಷ್ಠೆಯಿಂದ ಒದಗಿಸುವ ಅಗತ್ಯವನ್ನು ವಿವರಿಸಿದರು. ಶೇಖರಪ್ಪ ಗಡೆದ್, ಖಜಾಂಚಿ ತಾಲೂಕು ನ್ಯಾಯವಾದಿಗಳ ಸಂಘ, ಇವರು ಮಾತನಾಡಿ "ಸಾಲವಿಲ್ಲದವನೂ, ಆರೋಗ್ಯವಂತನೂ ಆದವನೇ ನಿಜವಾದ ಶ್ರೀಮಂತ" ಎಂದು ಆರೋಗ್ಯದ ಮಹತ್ವವನ್ನು ಒತ್ತಿಹೇಳಿದರು,ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ ಗೀತಾ ಹಿರೇಮಠ, ಕ್ಷೇತ್ರ ಆರೋಗ್ಯ ಶಿಕ್ಷಣ ಅಧಿಕಾರಿ, ತಾಯಿ ಮಗು ಆರೋಗ್ಯ, ನವಜಾತ ಶಿಶು ಆರೋಗ್ಯ, ಲಸಿಕಾ ಕಾರ್ಯಕ್ರಮ, ಕುಷ್ಠರೋಗ ನಿರ್ಮೂಲನೆ, ಇಂದ್ರಧನುಷ್, ಬಾಯಿ ಆರೋಗ್ಯ ಸೇರಿದಂತೆ ಅನೇಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಪ್ರಬೋಧನಾತ್ಮಕ ಉಪನ್ಯಾಸ ನೀಡಿ ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸಿದರು, ಕಾರ್ಯಕ್ರಮದಲ್ಲಿ ಶ್ರೀ ಲಾಜರ್ ಸಿರಿಲ್ ಜಿ, ನರ್ಸಿಂಗ್ ಪ್ರಾಚಾರ್ಯರು, ಆರೋಗ್ಯ ಸರ್ಕಾರಿ ಯೋಜನೆಗಳಾದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ, ಅನೀಮಿಯಾ ಮುಕ್ತ ಭಾರತ, ಆರ್.ಬಿ.ಎಸ್.ಕೆ, ಜೆ.ಎಸ್.ಎಸ್.ವೈ, ಪಿ.ಎಂ.ಎಂ.ಎಸ್.ವೈ, ಕಾಯಕಲ್ಪ, ಲಕ್ಷ್ಯ ಹಾಗೂ ಸಾಂಕ್ರಾಮಿಕ ಅಸಾಂಕ್ರಾಮಿಕ ರೋಗ ತಡೆ ಕಾರ್ಯಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಸಮಗ್ರ ಮಾಹಿತಿ ನೀಡಿದರು.ಕಾರ್ಯಕ್ರಮದ ಕುರಿತು ತಯಾರಿಸಲಾದ ಆರೋಗ್ಯ ಜಾಗೃತಿ ಫಲಕ ಮತ್ತು ರಂಗೋಲಿಗಳನ್ನು ಪ್ರಧಾನ ನ್ಯಾಯಾಧೀಶರು, ಕಾರ್ಯಕ್ರಮದ ಅಧ್ಯಕ್ಷರಾದ ಭೀಮನಗೌಡರು ಹಾಗೂ ಎಲ್ಲಾ ಗಣ್ಯರು ವೀಕ್ಷಿಸಿ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಸನ್ಮಾನ್ಯ ನ್ಯಾಯಾಧೀಶರು ರೂಪ ಕೆ. ಭೀಮನಗೌಡ ಅಧ್ಯಕ್ಷ, ತಾಲೂಕು ನ್ಯಾಯವಾದಿಗಳ ಸಂಘ ಹಿರಿಯ ವಕೀಲರು ಖಾಜಿ ಮಲಿಕ್ ಸಹಾಯಕ ಸರಕಾರಿ ಅಭಿಯೋಜಕರು ಶ್ರೀ ವಿಜಯಚಂದ್ರ ಪ್ರಭು ಬಿ ಖಜಾಂಚಿ ಶ್ರೀ ಶೇಖರಪ್ಪ ಗಡೆದ್ ತಾಲೂಕು ನ್ಯಾಯವಾದಿಗಳ ಸಂಘ ಸಿಂಧನೂರು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ಸನ್‌ರೈಸ್ ಗ್ರೂಪ್ ಆಫ್ ಇನ್ಸಿಟ್ಯೂಶನ್ ಕಾರ್ಯದರ್ಶಿ ಇರ್ಷಾದ್ ಕೆ. ಅತ್ತಾರ್ ಆಡಳಿತ ಮಂಡಳಿ ಸದಸ್ಯ ಆಸಿಫ್ ಪ್ರಾಚಾರ್ಯರಾದ ಚಕ್ರವರ್ತಿ, ವಾಸಿಂ ಹುಸೇನ್‌ನರ್ಸಿಂಗ್ ಪ್ರಾಚಾರ್ಯ ಲಾಜರ್ ಸಿರಿಲ್ ಉಪನ್ಯಾಸಕರು: ಆಶು ಪಾಷ, ರಾಜೇಶ್, ವೀರೇಶ್, ಕುಮಾರಿ ಶೋಭಾ, ಕುಮಾರಿ ವೀರೇಶ್ವರಿ, ಶ್ರೀಮತಿ ರಾಧಿಕಾ, ಕುಮಾರಿ ಚೈತ್ರ,ಎಲ್ಲಾ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು

# ಪ್ರಾಚೀನರ ಸಾವಯವ ಕೃಷಿಯನ್ನು ಮರಳಿ ಗ್ರಾಮಗಳಲ್ಲಿ ತರಬೇಕಾಗಿದೆ :ಡಾ.ಎಂ.ಬಸವಣ್ಣೆಪ್ಪ

ಯುವಮಾರ್ಗ ಸುದ್ದಿ





**ಮಾನ್ವಿ,ಡಿ.12–** ತಾಲೂಕಿನ ತಮ್ಮಾಪುರ ಗ್ರಾಮದಲ್ಲಿನ ಶ್ರೀ ರೇಣುಕಾ ಎಲ್ಲಮ್ಮ ದೇವಿ ಶಕ್ತಿಪೀಠದ ಆವರಣದಲ್ಲಿ ಮಾನ್ವಿಯ ಕಲ್ಮಠ ಪದವಿ ಪೂರ್ವ ಕಾಲೇಜಿನ ಎನ್.ಎಸ್.ಎಸ್ ಘಟಕದ ವತಿಯಿಂದ ನಡೆದ 2025–26 ನೇ ಸಾಲಿನ ಎನ್.ಎಸ್.ಎಸ್ ವಿಶೇಷ ಶಿಬಿರದ ಕಾರ್ಯಕ್ರಮದಲ್ಲಿ ಸಮಗ್ರ ಸಾವಯವ ಕೃಷಿ ಪದ್ಧತಿ ಕುರಿತು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಾದ ಸಾವಯವ ಕೃಷಿ ವಿಭಾಗದ ಮುಖ್ಯಾಸ್ಥರಾದ ಡಾ.ಎಂ.ಬಸವಣ್ಣೆಪ್ಪ ವಿಶೇಷ ಉಪನ್ಯಾಸ ನೀಡಿ ಭಾರತ ದೇಶ ಕೃಷಿ ಪ್ರಾಧನವಾಗಿರುವ ಕೃಷಿಕರ ದೇಶವಾಗಿದು ನಮ್ಮ ಪ್ರಾಚೀನರ ಸಾವಯವ ಕೃಷಿಯನ್ನು ಮರಳಿ ಗ್ರಾಮಗಳಲ್ಲಿ ತರುವ ,ಮೂಲಕ ಆರೋಗ್ಯ ಪೂರ್ಣವಾದ ಕೃಷಿ ಉತ್ಪನ್ನಗಳನ್ನು ಬೆಳೆಯುವುದಕ್ಕೆ ವಿದ್ಯಾರ್ಥಿಗಳು ರೈತರನ್ನು ಶಿಬಿರದ ಮೂಲಕ ಜಾಗೃತಿ ಮೂಡಿಸಬೇಕು.

ರೈತರು ಕೇವಲ ವಾಣಿಜ್ಯ ಕೃಷಿಗೆ ಹೆಚ್ಚಿನ ಅದ್ಯತೆಯನ್ನು ನೀಡದೆ ಸಮಗ್ರವಾದ ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಿದಲ್ಲಿ ರೈತರ ಕೃಷಿ ವೆಚ್ಚದಲ್ಲಿ ಗಣನಿಯವಾದ ಕಡಿತವಾಗುವುದಲ್ಲದೆ ರೈತರು ಕೃಷಿಯಲ್ಲಿ ಸ್ವಾವಲಂಬನೆ ಸಾಧಿಸುವುದಕ್ಕೆ ಸಾಧ್ಯವಾಗುತ್ತದೆ ಅದ್ದರಿಂದ ರೈತರು ಹೈನು ಗಾರಿಕೆ,ಕುರಿ,ಮೇಕೆ,ಆಡು,ಕೋಳಿ ಸಾಕಣಿಕೆಯ ಮೂಲಕ ಹೆಚ್ಚಿನ ಅದಾಯವನ್ನು ಪಡೆಯಬಹುದು ರೈತರಿಗೆ ಹೆಚ್ಚಿನ ಲಾಭ ದೊರೆಯಬೇಕಾದಲ್ಲಿ ತಾವು ಬೆಳೆಯುವ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಗೊಳಿಸಿ ನೇರ ಮಾರುಕಟ್ಟೆ ವ್ಯವಸ್ಥೆಯನ್ನು ರೂಪಿಸಿಕೊಳ್ಳುವುದು ಅವಶ್ಯವಾಗಿದೆ ಈ ನಿಟ್ಟಿನಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ರೈತರಿಗೆ ಅಗತ್ಯ ತಾಂತ್ರಿಕ ಮಾರ್ಗದರ್ಶನವನ್ನು ನೀಡುತ್ತಿದೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಎಸ್.ಎಸ್. ಪಾಟೀಲ್ ಮಾತನಾಡಿ ಕಾಲೇಜಿನ ವಿದ್ಯಾರ್ಥಿಗಳಿಗೆ ಗ್ರಾಮೀಣ ಭಾಗದ ಜನರ ಜೀವನವನ್ನು ತಿಳಿಸುವುದರ ಜೋತೆಗೆ ಗ್ರಾಮೀಣ ಭಾಗದ ಜನರಿಗೆ ವಿವಿಧ ವಿಷಯಗಳ ಪರಿಣಿತರಿಂದ ,ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಕಾರ್ಯಕ್ರಮವನ್ನು ಅಯೋಜಿಸುವ ಮೂಲಕ ಗ್ರಾಮೀಣ ಭಾಗದ ಅಭಿವೃದ್ದಿಗೆ ಕೂಡ ಎನ್.ಎಸ್.ಎಸ್ ವಿಶೇಷ ಶಿಬಿರಗಳು ಸಹಾಯಕವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ರೇಣುಕಾ ಎಲ್ಲಮ್ಮ ದೇವಿ ಶಕ್ತಿಪೀಠದ ಶ್ರೀ ಕುಬೇರಪ್ಪ ಸ್ವಾಮಿಗಳು ಕಾಲೇಜಿನ ಎನ್.ಎಸ್.ಎಸ್ ಘಟಕದ ಕಾರ್ಯಕ್ರಮಾಧಿಕಾರಿ ನರಸಣ್ಣ ನಾಯಕ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಹಂಪಣ್ಣ, ಎಸ್.ಡಿ.ಎಮ್.ಸಿ. ಅಧ್ಯಕ್ಷ ಉರುಕುಂದಪ್ಪ , ಗ್ರಾಮದ ಹಿರಿಯರಾದ ದೊಡ್ಡ ಹುಲಿಗೆಯ್ಯ ವಾಲೆಕರ್ ,ಬಾಲಯ್ಯ, ತಿಮ್ಮಪ್ಪ, ಕಾಲೇಜಿನ ಉಪನ್ಯಾಸಕರಾದ ಮಾರ್ಟಿನ್, ಆನಂದಕುಮಾರ್ , ಸೇರಿದಂತೆ ಇನ್ನಿತರರು ಇದ್ದರು.

# ವಸತಿ ಶಾಲೆಯಲ್ಲಿ ವಿವಿಧ ಕಾಯ್ದೆಗಳ ಅರಿವು ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ರಾಯಚೂರು,ಡಿ.12–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ವತಿಯಿಂದ ಸಿರವಾರ ತಾಲೂಕಿನ ನವಲಕಲ್ ಶ್ರೀ ಮತಿ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳು ಮತ್ತು ಕಾಯ್ದೆಗಳ ಕುರಿತು ಜಾಗೃತಿ ಕಾರ್ಯಕ್ರಮವು ಇತ್ತೀಚೆಗೆ ನಡೆಯಿತು.

ಈ ವೇಳೆ ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಅವರು ಮಾತನಾಡಿ, ಲೈಂಗಿಕ ಹಿಂಸೆಯಿಂದ ಮಹಿಳೆಯರನ್ನು ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸಮಾಜದಲ್ಲಿ ಹೆಣ್ಣು–ಗಂಡು ಎಂಬ ಭೇದ–ಭಾವ ದೂರುವಾಗಬೇಕು. ಗಂಡು ಹೆಣ್ಣು ಇಬ್ಬರು ಸಮಾನರು ಎನ್ನುವ ಭಾವನೆಯು ಪ್ರತಿಯೊಬ್ಬರಲ್ಲೂ ಬರಬೇಕು. ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ದೇವದಾಸಿ ಪದ್ಧತಿ ಇವೆಲ್ಲ ದೂರುವಾಗಬೇಕೆಂದರು.

ಬಾಲ್ಯ ವಿವಾಹ ವಿರುದ್ಧ ಕಠಿಣ ಕಾನೂನು ಇದೆ. 'ಮೊಬೈಲ್ ಬಿಡಿ ಪುಸ್ತಕ ಹಿಡಿ' ಎನ್ನುವ ವಿಧಾನ ಅನುಸರಿಸಿದಲ್ಲಿ ನಮ್ಮ ಜೀವನವು ಉತ್ತಮವಾಗಿ ರೂಪುಗೊಳ್ಳಲು ಸಾಧ್ಯವಿದೆ. ನಿರಂತರ ಪ್ರಯತ್ನವೆ ಯಶಸ್ಸಿನ ಗುಟ್ಟು ಆಗಿದೆ. ನೊಂದ ಮಹಿಳೆಯರು ಹಾಗೂ ವಿದ್ಯಾರ್ಥಿನಿಯರಿಗೆ 181 ಮಹಿಳಾ ಸಹಾಯವಾಣಿ, 1098 ಮಕ್ಕಳ ಸಹಾಯವಾಣಿ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀ ಮತಿ ಇಂದಿರಾಗಾಂಧಿ ವಸತಿ ಶಾಲೆಯ ಪ್ರಾಂಶುಪಾಲರಾದ ಲಿಂಗರಾಜ, ಶಿಶು

ಅಭಿವೃದ್ಧಿ ಯೋಜನಾಧಿಕಾರಿಗಳ ಹಿರಿಯ ಮೇಲ್ವಿಚಾರಕರಾದ ನಾಗಮ್ಮ. ಹೆಚ್ ಸೇರಿದಂತೆ ವಸತಿ ಶಾಲೆಯ ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಪೌಷ್ಟಿಕ ತೋಟ ಬೆಳೆಸಿ ಉತ್ತಮ ಆರೋಗ್ಯ ಪಡೆಯಿರಿ

ಯುವಮಾರ್ಗ ಸುದ್ದಿ





**ರಾಯಚೂರು,ಡಿ,12–** ಆರೋಗ್ಯಕರ ಜೀವನಕ್ಕೆ ಪೌಷ್ಟಿಕ ಆಹಾರವೇ ಮೂಲಾಧಾರವಾಗಿದ್ದು, ಪ್ರತಿ ಮನೆಯಲ್ಲೂ 'ಪೌಷ್ಟಿಕ ತೋಟ'ವನ್ನು ಬೆಳೆಸುವುದು ಅತ್ಯಂತ ಪ್ರಮುಖ ವಾಗಿದೆ ಎಂದು ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ತಜ್ಞರು ತಿಳಿಸಿದರು.

ಶುಕ್ರವಾರ ತಾಲ್ಲೂಕಿನ ಸ.ಮಾ.ಹಿ.ಪ್ರಾ.ಶಾಲೆ, ದುಗನೂರುಗೆ ಭೇಟಿ ನೀಡಿದ ಕೃಷಿ ವಿಜ್ಞಾನಿಗಳ ತಂಡವು, ವಿದ್ಯಾರ್ಥಿಗಳಿಗೆ ಪೌಷ್ಟಿಕ ತೋಟದ ಮಹತ್ವ ಮತ್ತು ಅದನ್ನು ಸಿದ್ಧಪಡಿಸುವ ಕುರಿತು ಮಾರ್ಗದರ್ಶನ ನೀಡಿತು.

ಡಾ. ಮಲ್ಲರೆಡ್ಡಿ (ಬೇಸಾಯ ಶಾಸ್ತ್ರ) ಅವರು ಮಾತನಾಡಿ, ಮನುಷ್ಯನ ಜೀವನಕ್ಕೆ ಆರೋಗ್ಯವೇ ಮುಖ್ಯ. ಇದರ ರಕ್ಷಣೆಗೆ ಪೌಷ್ಟಿಕ ಆಹಾರ ಅತ್ಯಗತ್ಯವಾಗಿದ್ದು, ಹಾಗಾಗಿ ಪ್ರತಿಯೊಬ್ಬರೂ ಪೌಷ್ಟಿಕ ತೋಟವನ್ನು ಬೆಳೆಸುವುದು ಬಹಳ ಮುಖ್ಯ ಎಂದು ತಿಳಿಸಿದರು. ಹಿರಿಯ ಕೃಷಿ ವಿಜ್ಞಾನಿ ಡಾ. ಹೇಮಲತಾ ಅವರು ಮಕ್ಕಳಿಗೆ ತೋಟವನ್ನು ಹೇಗೆ ತಯಾರು ಮಾಡಿಕೊಳ್ಳಬೇಕು, ಯಾವ ತರಕಾರಿಗಳನ್ನು ಬೆಳೆಯಬೇಕು ಎಂಬ ಕುರಿತು ಸ್ಥಳದಲ್ಲೇ ಪ್ರಾತ್ಯಕ್ಷಿಕೆ ನಡೆಸಿ ಮಾರ್ಗದರ್ಶನ ನೀಡಿದರು. ಕೀಟಶಾಸ್ತ್ರಜ್ಞೆ ಡಾ.ಶ್ರೀವಾಣಿ ಅವರು ಕೀಟಗಳ ಕುರಿತು ಮಾಹಿತಿ ನೀಡಿ, ವಿಶೇಷವಾಗಿ ಜೇನು ಹುಳುಗಳ ಮಹತ್ವವನ್ನು ವಿವರಿಸಿದರು. ಜೇನು ನೊಣಗಳು ಮಕರಂದವನ್ನು ಹೇಗೆ ಹುಡುಕುತ್ತವೆ ಮತ್ತು ಮಕರಂದವು ಎಲ್ಲಿ ಇರುತ್ತದೆ ಎಂಬುದನ್ನು ಚಟುವಟಿಕೆಗಳ ಮೂಲಕ ಮಕ್ಕಳಿಗೆ ಮನದಟ್ಟು ಮಾಡಿಕೊಟ್ಟರು. ಆಹಾರ ಸಂಸ್ಕರಣಾ ವಿಜ್ಞಾನಿ ಡಾ. ವೀಣಾ ಅವರು ನಿತ್ಯ ಜೀವನದಲ್ಲಿ ಶುದ್ಧ ಮತ್ತು ಸಂಸ್ಕರಣೆಯ ಆಹಾರದ ಅವಶ್ಯಕತೆಯ ಕುರಿತು ತಿಳುವಳಿಕೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರುಗಳಾದ ಗಫೂರ್ ಅವರು ಉಪಸ್ಥಿತರಿದ್ದರು. ಅಲ್ಲದೇ, ಸಹಶಿಕ್ಷಕರಾದ ಚಂದ್ರಶೇಖರ್ ನಾಯ್ಕ್, ಸಂಪತರಾಜ್, ಪುಲಿ ಅಂಜಿನೇಯ್ಯ, ಮಲ್ಲೇಶ, ನರೇಶಕುಮಾರ್, ನವೀನ್ ಕುಮಾತ್, ಮತ್ತು ಮಹೇಶ ಕುಮಾರ್ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

# ಒಳ್ಳೆಯದನ್ನು ಬೆಳೆಸೋಣ ಜ್ಞಾನವನ್ನು ಹಂಚೋಣ ವೇಮುಲಪಲ್ಲಿ ಗಾಂಧಿಯವರ ಕೃತಿ ಬಿಡುಗಡ



**ಬಳ್ಳಾರಿ, ಡಿ.12–** ವೇಮುಲಪಲ್ಲಿ ಗಾಂಧಿ ಅವರು ಈ ಶಾಲೆ ಕಾಲೇಜು ಮೂಲಕ ಒಳ್ಳೆಯದನ್ನೆ ಹಂಚುತ್ತಿದ್ದಾರೆ ಎಂದು ನಿವೃತ್ತ ಸಹ ಪ್ರಾಧ್ಯಾಪಕ ಡಾ.ಬಿ.ಆರ್.ಮಂಜುನಾಥ ಅಭಿಪ್ರಾಯಪಟ್ಟರು.

ಅವರು ನಿನ್ನೆ ಸಂಜೆ ನಗರದ ನಂದ ವಸತಿ ಶಾಲೆಯಲ್ಲಿ ಶಾಲೆಯ ಅಧ್ಯಕ್ಷ ವೇಮುಲಪಲ್ಲಿ ಗಾಂಧಿ ಅವರು ತೆಲುಗು ಭಾಷೆಯಲ್ಲಿ ಸಂಪಾದಿಸಿದ್ದ "ಮಂಚಿದಿ ಪೆಂಚುದಾಂ ವಿಜ್ಞಾನಂ ಪೆಂಚುದಾಮು" ಎಂಬ ಕೃತಿಯನ್ನು ಎಸ್.ಅಪ್ಪಯ್ಯ ಭಟ್ಟರು ಕನ್ನಡಕ್ಕೆ ಅನುವಾದಿಸಿರುವ "ಒಳ್ಳೆಯದನ್ನು ಬೆಳೆಸೋಣ ಜ್ಞಾನವನ್ನು ಹಂಚೋಣ" ಎಂಬ ಕೃತಿ ಬಿಡುಗಡೆ ಸಮಾರಂಭವನ್ನು ಉದ್ಘಾಟನೆ ಮಾಡಿ ಮಾತನಾಡುತ್ತಿದ್ದರು.

ಒಳ್ಳೆಯದು ಎಂದರೆ ಯಾವುದು. ಪ್ರಕೃತಿ ಯಾವಾಗಲೂ ಒಳ್ಳೆಯದನ್ನೇ ನೀಡುತ್ತದೆ. ಅದನ್ನು ನಾವು ಹೇಗೆ ಸ್ವೀಕಾರ ಮಾಡುತ್ತೇವೆ ಹಾಗೆ ಒಳ್ಳೆಯದು ಮತ್ತು ಜ್ಞಾನ ಎಲ್ಲರಿಗೂ ದೊರೆಯಲಿದೆ. ಹಾಗಾಗಿ ನಾವು ಸಹ ಒಳ್ಳೆಯದನ್ನೇ ಮಾಡುತ್ತ ಅದನ್ನು ಹಂಚುವ ಕೆಲಸ ಆಗಬೇಕೆಂದರು.ಕೃತಿ ಬಿಡುಗಡೆ ಮಾಡಿ ಮಾತನಾಡಿದ ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಅರುಣ್ ಕುಮಾರ್ ಲಗಶೆಟ್ಟಿ,

ವಿ.ಗಾಂಧಿ ಅವರ ಸಮಾಜಮುಖಿ ಕಾರ್ಯ ಎಲ್ಲರಿಗೂ ಮಾದರಿಯಾಗಿದೆ. ಸಾಧನೆ ಮುಖ್ಯ ಅದರ ಕನಸು ಮಕ್ಕಳದ್ದಾಗಬೇಕು. ಅದಕ್ಕೆ ಎಲ್ಲರೂ ಒಳ್ಳೆಯದನ್ನೇ ಮಾಡಿ, ಸಂಕಲ್ಪಿಸಿದರೆ ಜ್ಞಾನವೂ ಲಭಿಸಲಿದೆಂದರು.

ಕೃತಿ ಕುರಿತು ಮಸತನಾಡಿದ ನಿವೃತ್ತ ಉಪನ್ಯಾಸಕ ಎನ್.ಬಸವರಾಜ್, ಪತ್ರಿಕೆಗಳಲ್ಲಿ ವಿವಿಧ ವಸ್ತುವಿಷಯಗಳನ್ನು ಒಳಗೊಂಡು ಪ್ರಕಟಗೊಂಡ ಉತ್ತಮ ಅಂಕಣಗಳ ಬರಹಗಳನ್ನು ಕ್ರೂಡೀಕರಿಸಿ ಈ ಕೃತಿ ನೀಡಿರುವುದು ಶ್ಲಾಘನೀಯಕಾರ್ಯವೆಂದರು.ಎಸ್.ಅಪ್ಪಯ್ಯ ಭಟ್ಟರು ಮಾತನಾಡಿ ಕೃತಿಯಲ್ಲಿ 13, 14 ನೇ ಲೇಖನಗಳನ್ನು ಓದಿ ಎಂದು ಒತ್ತಿ ಹೇಳಿದರು.ಅಧ್ಯಕ್ಷತೆವಹಿಸಿ ಮಾತನಾಡಿದ ವೇಮುಲಪಲ್ಲಿ ಗಾಂಧಿ ಅವರು ಮಾತನಾಡಿ, ಪ್ರತಿದಿನ ಪೇಪರ್ ನಲ್ಲಿ ಬರುವ ಉತ್ತಮವಾದುದನ್ನು ಸಂಗ್ರಹಿಸಿ ಈ ಕೃತಿ ತರಲು ಸಂಕಲ್ಪ ಮಾಡಿದೆನೆಂದರು. ಇನ್ನೂ ಎರೆಡು ಸಂಪುಟದಲ್ಲಿ ಈ ಕೃತಿ ಬರಲಿದೆ. ಇವನ್ನು ಓದಿದರೆ ಮಾನವೀಯತೆ ಎಲ್ಲರೂ ಮೂಡಲಿದೆಂಬ ಆಶಾಭಾವನೆ ವ್ಯಕ್ತಪಡಿಸಿದರು.

# ರಾಜ್ಯದಲ್ಲಿ ಕನ್ನಡ ನಾಮಫಲಕ ಕಡ್ಡಾಯ

**ಬೆಳಗಾವಿ,ಡಿ.12–** ವಾಣಿಜ್ಯ , ಕೈಗಾರಿಕೆ, ಟ್ರಸ್ಟ್, ಆಸ್ಪತ್ರೆ, ಮನರಂಜನಾ ಕೇಂದ್ರ, ಹೋಟೆಲ್ ಸೇರಿದಂತೆ ಮತ್ತಿತರ ಕಡೆ ಕನ್ನಡ ಭಾಷೆಯ ಕಡ್ಡಾಯ ನಾಮಫಲಕ ಅನುಷ್ಠಾನಗೊಳಿಸುವ ನಿಯಮವನ್ನು 15 ದಿನಗಳಿಂದ 1 ತಿಂಗಳೊಳಗೆ ರಾಜ್ಯಾದ್ಯಂತ ಕಡ್ಡಾಯ ಮಾಡುವುದಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ವಿಧಾನಪರಿಷತ್‌ನಲ್ಲಿ ಸದಸ್ಯೆ ಉಮಾಶ್ರೀ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕನ್ನಡ ಕಡ್ಡಾಯ ನಾಮಫಲಕ ಅನುಷ್ಠಾನ ಸಂಬಂಧ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಗೆ ರೀತಿ ನಿಯಮಗಳನ್ನು ರೂಪಿಸಿ ಕಳುಹಿಸಿಕೊಟ್ಟಿದ್ದೇವೆ. 15 ದಿನಗಳಿಂದ ಒಂದು ತಿಂಗಳೊಳಗೆ ಇದು ಪೂರ್ಣಗೊಳ್ಳಬಹುದು. ನಂತರ ರಾಜ್ಯಾದ್ಯಂತ ಆದೇಶ ಹೊರಬೀಳಲಿದೆ ಎಂದು ತಿಳಿಸಿದರು.ಕನ್ನಡ ಕಡ್ಡಾಯ ನಾಮಫಲಕ ಅಭಿಯಾನವು ಅನೇಕ ಜಿಲ್ಲೆಗಳಲ್ಲಿ ಯಶಸ್ವಿಯಾಗಿದೆ. 11 ಜಿಲ್ಲೆಗಳಲ್ಲಿ ನೂರಕ್ಕೆ ನೂರರಷ್ಟು ಅನುಷ್ಠಾನವಾಗಿದ್ದರೆ, ಕೆಲವು ಜಿಲ್ಲೆಗಳಲ್ಲಿ, ಶೇ. 80, 85, 90ರಷ್ಟು ಅನುಷ್ಠಾನವಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಡ್ಡಾಯ ಮಾಡಲು ಈ ನಿಯಮವನ್ನು ಜಾರಿ ಮಾಡುತ್ತೇವೆ ಎಂದರು.ನಮ ರಾಜ್ಯದಲ್ಲಿ ಕನ್ನಡ ಕಡ್ಡಾಯ ಆಗಬೇಕೆಂಬುದರಲ್ಲಿ ಎರಡು ಮಾತಿಲ್ಲ. ಇದಕ್ಕಾಗಿಯೇ ರಾಜ್ಯಮಟ್ಟದ ಸಮಿತಿಯನ್ನು ರಚಿಸಿದ್ದೇವೆ. ಇದರಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಇರುತ್ತಾರೆ. ಅದೇ ರೀತಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ಮಾಡಿದ್ದೇವೆ. ಕನ್ನಡವನ್ನು ಕಡ್ಡಾಯಗೊಳಿಸಬೇಕೆಂಬ ಸರ್ಕಾರದ ನಿಲುವಿನಲ್ಲಿ ರಾಜೀಯಾಗುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.31 ಜಿಲ್ಲೆಗಳಲ್ಲಿ ವಿಚಕ್ಷಣ ದಳ : ಬೆಂಗಳೂರಿನಲ್ಲಿ 8 ವಲಯಗಳನ್ನು ಸ್ಥಾಪನೆ ಮಾಡಿದ್ದೇವೆ. ಇದಕ್ಕಾಗಿ ವಿಚಕ್ಷಣ ದಳವನ್ನು ಸಹ ಸ್ಥಾಪನೆ ಮಾಡಲಿದ್ದೇವೆ. ಹೊರಗುತ್ತಿಗೆ ಆಧಾರದ ಮೇಲೆ ವಾಹನಗಳನ್ನು ಖರೀದಿ ಮಾಡಲಿದ್ದೇವೆ. ಈಗಾಗಲೇ ಕಚೇರಿ ಕೂಡ ಆರಂಭವಾಗಿದೆ. ಸಮಿತಿ ಕೆಲವು ಕಾರಣಗಳಿಂದ ವಿಳಂಬವಾಗಿದೆ ಎಂಬುದನ್ನು ಒಪ್ಪಿಕೊಂಡರು.ಕನ್ನಡ ನಾಮಫಲಕ ಹಾಕದೇ ಇದ್ದರೆ, ಮೊದಲ ಅಪರಾಧಕ್ಕಾಗಿ 5 ಸಾವಿರ ದಂಡ ಹಾಕುತ್ತೆ?ವೆ. ಎರಡನೇ ಅಪರಾಧಕ್ಕೆ 10 ಸಾವಿರ ಹಾಗೂ ಪ್ರತಿ ಅಪರಾಧಕ್ಕೆ 20 ಸಾವಿರ ವಿಸ್ತರಿಸಬಹುದಾಗಿದೆ. 60:40 ಅನುಪಾತದಲ್ಲಿ ಕನ್ನಡ ಬೋರ್ಡ್ ಹಾಕಬೇಕು. ಜಿಲ್ಲಾಧಿಕಾರಿಗಳಿಗೆ ಸೂಚನೆ ಸಹ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H